ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೮೨

**ಪಟ್ಟಿ – ೧**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತಮೂರನೆಯ ಅಧಿವೇಶನ**

**ಮಂಗಳವಾರ, ದಿನಾಂಕ : ೦೭ನೇ ಫೆಬ್ರವರಿ, ೨೦೧೭**

---

## ಸಮೂಹ – II

೧. ಇಂಧನ ಸಚಿವರು.

೨. ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು.

೩. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು.

೪. ಕೃಷಿ ಸಚಿವರು.

೫. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು.

೬. ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು.

---

## ಕೃಷಿ ಭೂಮಿ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧ (೬೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಇರುವ ಒಟ್ಟು ಕೃಷಿ ಭೂಮಿ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಇದರಲ್ಲಿ ನೀರಾವರಿ ಹಾಗೂ ಒಣ ಭೂಮಿ ಎಷ್ಟು;

(ಇ) ನೀರಾವರಿ ಯೋಜನೆ ರೂಪಿಸಿ ಒಣಭೂಮಿಯಲ್ಲಿ ಕೃಷಿ ಚಟುವಟಿಕೆ ಕೈಗೊಳ್ಳಲು ಸರ್ಕಾರ ಚಿಂತಿಸಿದೆಯೇ; ಹಾಗಿದ್ದಲ್ಲಿ, ರೂಪರೇಷೆ ಹಾಕಿಕೊಂಡು ಒಣ ಭೂಮಿಯನ್ನು ಕೃಷಿ ಭೂಮಿಯನ್ನಾಗಿ ಪರಿವರ್ತಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

(ಈ) ಹಾಗಿದ್ದಲ್ಲಿ, ನಿರುದ್ಯೋಗಿ ವಿದ್ಯಾವಂತರನ್ನು ಈ ಕಾರ್ಯದಲ್ಲಿ ತೊಡಗಿಸಿಕೊಳ್ಳಲಾಗುವುದೇ?

## ಪಶು ವೈದ್ಯ ಆಸ್ಪತ್ರೆ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨ (೬೫) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿ ಇರುವ ಪಶುವೈದ್ಯ ಆಸ್ಪತ್ರೆಗಳೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಆಸ್ಪತ್ರೆಗಳಲ್ಲಿ ಸಿಬ್ಬಂದಿ ಕೊರತೆ ಇರುವುದು ನಿಜವೇ; ಹಾಗಿದ್ದಲ್ಲಿ, ವಿವರ ನೀಡುವುದು;

(ಇ) ಮಂಡ್ಯ ಜಿಲ್ಲೆಯಲ್ಲಿನ ಜಾನುವಾರುಗಳ ಆರೋಗ್ಯ ರಕ್ಷಣೆಗೆ ಕೈಗೊಂಡಿರುವ ಇತ್ತೀಚಿನ ಕ್ರಮಗಳಾವುವು;

(ಈ) ಜಿಲ್ಲೆಯಲ್ಲಿ ಹಾಲು ಉತ್ಪಾದನೆ ಹೆಚ್ಚಿಸಲು ರೈತರಿಗೆ ನೀಡಿರುವ ಸೌಲಭ್ಯಗಳೇನು; ಇದರ ಫಲಾನುಭವಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಉ) ಜಿಲ್ಲೆಯಲ್ಲಿ ಜಾನುವಾರುಗಳ ಮೇವಿನ ಸಮಸ್ಯೆ ಬಗ್ಗೆ ಕೈಗೊಂಡಿರುವ ಕ್ರಮಗಳೇನು?

## ತುಂತುರು/ಹನಿ ನೀರಾವರಿ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩ (೬೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ತೋಟಗಾರಿಕೆ ಬೆಳೆಗಳಿಗೆ ತುಂತುರು/ ಹನಿನೀರಾವರಿ ಅಳವಡಿಸಲು ಸಹಾಯಧನ ಕೋರಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇದರಲ್ಲಿ ಸಹಾಯಧನ ಪಡೆದ ರೈತರ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಬಾಕಿ ರೈತರಿಗೆ ಸಹಾಯಧನ ಪಾವತಿಸಲು ಸರ್ಕಾರ ಕೈಗೊಂಡ ಕ್ರಮವೇನು;

(ಈ) ಮಂಡ್ಯ ಜಿಲ್ಲೆಗೆ ಕಳೆದ ಮೂರು ವರ್ಷಗಳಲ್ಲಿ ತುಂತುರು/ಹನಿನೀರಾವರಿಗೆ ಮಂಜೂರಾದ ಮೊತ್ತವೆಷ್ಟು; ಇದರಲ್ಲಿ ಬಳಕೆಯಾದ ಮೊತ್ತವೆಷ್ಟು? (ವಿವರ ನೀಡುವುದು)

## ರಸ್ತೆ ಕಾಮಗಾರಿ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪ (೬೪) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ "ರಸ್ತೆ ಕೇಂದ್ರ ನಿಧಿಗೆ" (Central Road Fund) ಕ್ಷೇತ್ರವಾರು ಮಂಜೂರಾಗಿರುವ ಮೊತ್ತ ಎಷ್ಟು ; (ವಿವರ ನೀಡುವುದು)

(ಆ) ಇದರಡಿ ಮಂಡ್ಯ ಜಿಲ್ಲೆಗೆ ಬಿಡುಗಡೆಯಾಗಿರುವ ಮೊತ್ತವೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಮಂಡ್ಯ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಕೈಗೊಂಡ ರಸ್ತೆ ಕಾಮಗಾರಿಗಳಾವುವು; (ತಾಲ್ಲೂಕುವಾರು ವಿವರ ನೀಡುವುದು)

(ಈ) ಕಾಮಗಾರಿ ನಿರ್ವಹಿಸಿದ ಗುತ್ತಿಗೆದಾರರುಗಳ ಹೆಸರು ವಿಳಾಸದೊಂದಿಗೆ ವಿವರ ನೀಡುವುದು;

(ಉ) ರಸ್ತೆ ಕಾಮಗಾರಿಗಳಲ್ಲಿ ಕಳಪೆ ಕಾಮಗಾರಿ ಬಗ್ಗೆ ದೂರುಗಳು ಬಂದಿವೇಯೇ; ಬಂದಿದ್ದಲ್ಲಿ, ವಿವರ ನೀಡುವುದು;

(ಊ) ಈ ರಸ್ತೆ ಕಾಮಗಾರಿಗಳಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಹಣ ದುರುಪಯೋಗ ಮಾಡಿರುವ ಬಗ್ಗೆ ದೂರುಗಳಿವೆಯೇ; ಹಾಗಿದ್ದಲ್ಲಿ, ವಿವರ ನೀಡುವುದು?

# ರಾಜ್ಯದಲ್ಲಿ ಇಂಧನ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಸ್ಥೆಗಳು ಹಾಗೂ ೩೭೧(ಜೆ) ಅಡಿಯಲ್ಲಿ ಮುಂಬಡ್ತಿ ನೇಮಕಾತಿಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

* (೭೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಇಂಧನ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಸ್ಥೆ (ಕಂಪನಿ)ಗಳು ಯಾವುವು; (ಸಂಸ್ಥೆವಾರು, ವ್ಯಾಪ್ತಿ ಹಾಗೂ ಕಾರ್ಯಚಟುವಟಿಕೆಗಳ ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಸಂಸ್ಥೆಗಳಲ್ಲಿ ಸಂವಿಧಾನ ೩೭೧(ಜೆ) ಕಲಂ ಅನ್ವಯ ಮುಂಬಡ್ತಿಗಳಲ್ಲಿ ಹಾಗೂ ನೇಮಕಾತಿಗಳಲ್ಲಿ ಮೀಸಲಾತಿ ಕಲ್ಪಿಸಲಾಗಿದೆಯೇ; (ಸಂಸ್ಥೆವಾರು, ಹುದ್ದೆವಾರು, ವೃಂದವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಇಲಾಖೆಯು ಬೇರೆ ಬೇರೆ ಸಂಸ್ಥೆ (ಕಂಪನಿ)ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹೈದ್ರಾಬಾದ್– ಕರ್ನಾಟಕ ಪ್ರದೇಶದ ನೌಕರರಿಗೆ ೩೭೧(ಜೆ) ಅಡಿಯಲ್ಲಿ ಅವರಿಂದ ಐಚ್ಛಿಕ (OPTION) ಪಡೆದು ಮಾತೃ ವೃಂದಕ್ಕೆ (ಹೈದ್ರಾಬಾದ್–ಕರ್ನಾಟಕ ಪ್ರದೇಶಕ್ಕೆ) ವರ್ಗಾವಣೆ ಮಾಡಲಾಗುತ್ತಿದೆಯೇ; ಇದ್ದರೆ ಸಂಸ್ಥೆ (ಕಂಪನಿ)ವಾರು, ಹುದ್ದೆವಾರು ಹಾಗೂ ವೃಂದವಾರು ಮಾಹಿತಿ ನೀಡುವುದು;

(ಈ) ಜೆಸ್ಕಾಂ (GESCOM) ಹೊರತುಪಡಿಸಿ ರಾಜ್ಯದ ಇತರ ಸಂಸ್ಥೆ (ಕಂಪನಿ)ಗಳಲ್ಲಿ ೩೭೧(ಜೆ) ಅಡಿಯಲ್ಲಿರುವ ೮% ಮೀಸಲಾತಿ ಕಲ್ಪಿಸಲಾಗಿದೆಯೇ? (ಸಂಸ್ಥೆವಾರು, ವೃಂದವಾರು ಹಾಗೂ ಹುದ್ದೆವಾರು, ಮಾಹಿತಿ ನೀಡುವುದು)

## ಕಲಬುರಗಿಯಲ್ಲಿ "ತೊಗರಿ ಟೆಕ್ನಾಲಜಿ ಪಾರ್ಕ್" ಘೋಷಣೆಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೬ (೭೪) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿಯಲ್ಲಿ "ತೊಗರಿ ಟೆಕ್ನಾಲಜಿ ಪಾರ್ಕ್" (INTAC-G) ಸರ್ಕಾರದಿಂದ ಯಾವಾಗ ಘೋಷಣೆ ಮಾಡಲಾಯಿತು ಹಾಗೂ ಸದರಿ ಯೋಜನೆಗೆ ಎಷ್ಟು ಅನುದಾನ ಮಂಜೂರು ಮಾಡಲಾಯಿತು; (ಯೋಜನೆವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಯೋಜನೆಗೆ ಅವಶ್ಯಕತೆ ಇರುವ ಭೂಮಿ ಎಷ್ಟು ಹಾಗೂ ಕೆ.ಐ.ಎ.ಡಿ.ಬಿ. (KIADB) ಮೂಲಕ ಇಲ್ಲಿಯವರೆಗೂ ಎಷ್ಟು ಜಮೀನನ್ನು ವಶಪಡಿಸಿಕೊಳ್ಳಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಇ) KIADB ಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಪ್ರಸ್ತುತ ಸದರಿ ಯೋಜನೆಯ ಸಂಪೂರ್ಣ ಮಾಹಿತಿ ಹಾಗೂ ಯೋಜನೆಗೆ ತಗಲುವ ವೆಚ್ಚವೆಷ್ಟು? (ಮಾಹಿತಿ ನೀಡುವುದು)

## ಹೈದ್ರಾಬಾದ್–ಕರ್ನಾಟಕ ಭಾಗದಲ್ಲಿ ಕಳೆದ ೩ ವರ್ಷಗಳಲ್ಲಿ ಬೆಳೆದ ತೊಗರಿ ಬೆಳೆ ಪ್ರಮಾಣದ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೭ (೭೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಹೈದ್ರಾಬಾದ್–ಕರ್ನಾಟಕ ಪ್ರದೇಶಗಳಲ್ಲಿ ಬಿತ್ತನೆ ಆದ ಹಾಗೂ ಬೆಳೆದಂತಹ ತೊಗರಿ ಬೆಳೆ ಪ್ರಮಾಣವೆಷ್ಟು; (ಜಿಲ್ಲವಾರು, ವರ್ಷವಾರು ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಮಾರುಕಟ್ಟೆಯಲ್ಲಿ ತೊಗರಿ ಬೆಳೆಗೆ ಪ್ರತಿ ಕ್ವಿಂಟಾಲ್‌ಗೆ ನಿಗಧಿಪಡಿಸಿರುವ ಸರಾಸರಿ ದರವೆಷ್ಟು; (ವರ್ಷವಾರು ವಿವರ ನೀಡುವುದು)

(ಇ) ತೊಗರಿ ಬೆಳೆಯಲು ಪ್ರತಿ ಎಕರೆಗೆ ತಗಲುವ ಸರಾಸರಿ ವೆಚ್ಚವೆಷ್ಟು; (ಮಾಹಿತಿ ನೀಡುವುದು)

(ಈ) ಪ್ರಸಕ್ತ ವರ್ಷದಲ್ಲಿ ತೊಗರಿಬೆಳೆಯು ಮಾರುಕಟ್ಟೆಗಳಲ್ಲಿ ಭಾರೀ ಬೆಲೆ ಕುಸಿತ ಕಂಡಿದ್ದು, ತೊಗರಿ ಬೆಳೆಗಾರರ ನೇರವಿಗೆ ಬರಲು ಸರ್ಕಾರ ಮುಂದಾಗುವುದೇ? (ಮಾಹಿತಿ ನೀಡುವುದು)

## ಕೇಂದ್ರದ “ಅಮೃತ ಯೋಜನೆ” ಯಡಿಯಲ್ಲಿ ಜಿಲ್ಲಾ ಕೇಂದ್ರ ಸ್ಥಾನಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೮ (೭೭) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೇಂದ್ರದ "ಅಮೃತ ಯೋಜನೆ" ಅಡಿಯಲ್ಲಿ ಆಯ್ಕೆಯಾಗಲು ಇರುವ ಮಾನದಂಡಗಳೇನು; ಇಲ್ಲಿಯವರೆಗೆ ಆಯ್ಕೆಯಾದ ಜಿಲ್ಲಾ ಕೇಂದ್ರ ಸ್ಥಾನದ ನಗರಗಳು ಎಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಯೋಜನೆಯಡಿ ಆಯ್ಕೆಯಾಗದಿರುವ ಜಿಲ್ಲಾ ಕೇಂದ್ರಸ್ಥಾನಗಳನ್ನು ಪುನಃ ಆಯ್ಕೆ ಮಾಡುವಂತಹ ನಿಟ್ಟಿನಲ್ಲಿ ಸರ್ಕಾರದ ಮುಂದಿರುವ ಕ್ರಮವೇನು; (ಮಾಹಿತಿ ನೀಡುವುದು)

(ಇ) ಸರ್ಕಾರವು "ಅಮೃತ ಯೋಜನೆ" ಅಡಿಯಲ್ಲಿ ಜಿಲ್ಲಾ ಕೇಂದ್ರ ಸ್ಥಾನದ ನಗರಗಳು ಹಾಗೂ ಬೃಹತ್ ಕೈಗಾರಿಕೆ ಹೊಂದಿದ ನಗರಗಳು, ಶೈಕ್ಷಣಿಕ ನಗರಗಳನ್ನು ಆಯ್ಕೆಯಾಗುವ ನಿಟ್ಟಿನಲ್ಲಿ ನಿಯಮಗಳಲ್ಲಿ ತಿದ್ದುಪಡಿ ತರುವ ಪ್ರಸ್ತಾವನೆಯನ್ನು ತಯಾರಿಸಿ ಕೇಂದ್ರಕ್ಕೆ ಕಳುಹಿಸಲು ಮುಂದಾಗುವುದೇ? (ಮಾಹಿತಿ ನೀಡುವುದು)

## ಗುಲ್ಬರ್ಗಾ ವಿದ್ಯುತ್ ಶಕ್ತಿ ಕಂಪನಿಯ ವಿದ್ಯುತ್ ಪರಿವರ್ತಕ ಹಾಗೂ ಗುತ್ತಿಗೆಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):-**

೯ (೭೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗುಲ್ಬರ್ಗಾ ವಿದ್ಯುತ್ ಶಕ್ತಿ ಕಂಪನಿಯ ವ್ಯಾಪ್ತಿಯಲ್ಲಿ ವಿದ್ಯುತ್ ಪರಿವರ್ತಕಗಳಿಗೆ ಮೀಟರ್‌ಗಳನ್ನು ಅಳವಡಿಸುವ ಯೋಜನೆ

ಕೈಗೊಳ್ಳಲಾಗಿದೆಯೇ; ಕೈಗೊಂಡಿದ್ದಲ್ಲಿ ಯೋಜನೆಯ ಉದ್ದೇಶಗಳೇನು ಹಾಗೂ ಯಾವ ಸಾಲಿನಿಂದ ಕೈಗೊಂಡಿದೆ ಹಾಗೂ ಈ ಯೋಜನೆಗೆ ಯೋಜನಾ ವೆಚ್ಚವೆಷ್ಟು; (ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ವಿದ್ಯುತ್ ಪರಿವರ್ತಕಗಳಿಗೆ ಮೀಟರ್ ಅಳವಡಿಸುವ ಗುತ್ತಿಗೆಯನ್ನು ನೀಡಲಾಗಿದೆಯೇ; ಇದ್ದರೆ, ಗುತ್ತಿಗೆದಾರರ ಮಾಹಿತಿಗಳು ಹಾಗೂ ವಿದ್ಯುತ್ ಪರಿವರ್ತಗಳ ಸಂಖ್ಯೆಗಳೆಷ್ಟು; ಅಳವಡಿಸಿದ ಮೀಟರ್‌ಗಳೆಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಯೋಜನೆಯ ಗುತ್ತಿಗೆಗೆ ಪಾವತಿಯಾದ ಹಣವೆಷ್ಟು; (೨೦೧೧ ರಿಂದ ೨೦೧೭ರವರೆಗೂ ವರ್ಷವಾರು ಹಾಗೂ ಗುತ್ತಿಗೆದಾರರ ಮಾಹಿತಿಗಳ ಸಂಪೂರ್ಣ ವಿವರ ನೀಡುವುದು)

(ಈ) ಸದರಿ ಯೋಜನೆಯಿಂದ ಕಂಡು ಬಂದ ವಿದ್ಯುತ್ ವಿತರಣೆ ಎಷ್ಟು ; ಬಳಕೆ ಎಷ್ಟು ಹಾಗೂ ಸೋರಿಕೆ ಪ್ರಮಾಣ ಎಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ಸೋಲಾರ್ ಪ್ಯಾಕ್ಟರ್ ಯೋಜನೆಗಳ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦ (೧೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸೋಲಾರ್ ಪ್ಯಾಕ್ಟರ್ ಯೋಜನೆಯಡಿ ಜಿಲ್ಲಾ ಸರ್ಕಲ್‌ಗಳನ್ನು ಆಯ್ಕೆ ಮಾಡಲಾಗಿದೆಯೇ;

(ಆ) ಈ ಯೋಜನೆಯಡಿ ಸರ್ಕಾರವು ಎಷ್ಟು ಫಲಾನುಭವಿಗಳಿಗೆ ಅನುದಾನ ಪೂರೈಸಿದೆ; ಆ ಫಲಾನುಭವಿಗಳು ಕೇವಲ ಸರ್ಕಾರಿ ಅಧಿಕಾರಿಗಳಾಗಿರುವ ಆರೋಪ ಸರ್ಕಾರದ ಗಮನಕ್ಕೆ ಬಂದಿದೆಯೇ:

(ಇ) ಬಂದಿದ್ದರೆ, ಸರ್ಕಾರದ ಕ್ರಮವೇನು ಫಲಾನುಭವಿಗಳ ಆಯ್ಕೆಯಾ ಮಾನದಂಡವೇನು? (ವಿವರ ನೀಡುವುದು)

## ರಾಷ್ಟ್ರೀಯ ಹೆದ್ದಾರಿಗಳಲ್ಲಿ ರಾತ್ರಿ ವೇಳೆ ಜಾನುವಾರುಗಳ ಅಪಘಾತದ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧ (೧೩) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಷ್ಟ್ರೀಯ ಹೆದ್ದಾರಿಗಳಲ್ಲಿ ರಾತ್ರಿ ವೇಳೆ ವಾಹನಗಳ ವೇಗದ ರಭಸಕ್ಕೆ ನಾಯಿ, ಎಮ್ಮೆ, ಆಕಳು, ಕುದರೆ, ಇತ್ಯಾದಿಗಳು ಅಪಘಾತಕ್ಕೀಡಾಗಿ ಮೃತಪಡುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಮೃತ ಪಟ್ಟ ಪ್ರಾಣಿಗಳನ್ನು ರಸ್ತೆಯಿಂದ ತೆರವುಗೊಳಿಸುವ ಜವಾಬ್ದಾರಿ ಯಾವ ಇಲಾಖೆಯದ್ದು;

(ಇ) ರಾಷ್ಟ್ರೀಯ ಹೆದ್ದಾರಿಗಳಲ್ಲಿ ರಾತ್ರಿ ವೇಳೆ ಪೆಟ್ರೋಲಿಂಗ್ ವ್ಯವಸ್ಥೆ(ಗಸ್ತು)ಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ?

## ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಗಳ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೨ (೦೯) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಐದು ವರ್ಷಗಳ ಅವಧಿಯಲ್ಲಿನ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ ಅಡಿಯಲ್ಲಿ ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಯಲ್ಲಿ ನಿರ್ಮಾಣಗೊಂಡ ರಸ್ತೆಗಳ ಈಗಿನ ಸ್ಥಿತಿಗತಿಗಳೇನು;

(ಆ) ಈ ಯೋಜನೆ ಅಡಿಯಲ್ಲಿ ಹದಗೆಟ್ಟ ರಸ್ತೆಗಳನ್ನು ಪುನರ್ ನಿರ್ಮಿಸಲು ಯಾವುದಾದರೂ ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆಯೇ;

(ಇ) ಹಾಗಿದ್ದಲ್ಲಿ, ಯಾವ ಕಾಲ ಮಿತಿಯೊಳಗೆ ಈ ರಸ್ತೆಗಳನ್ನು ಅಭಿವೃದ್ಧಿಪಡಿಸಲಾಗುವುದು?

## ಕೃಷಿ ಭೂಮಿಯ ಫಲವತ್ತತೆ ಕಡಿಮೆಯಾಗುತ್ತಿರುವ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೩ (೧೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕೃಷಿಗೆ ಯೋಗ್ಯವಾದ ಭೂಮಿಯ ವಿಸ್ತೀರ್ಣ ಎಷ್ಟು;

(ಆ) ಕೃಷಿಗೆ ಯೋಗ್ಯವಾದ ಭೂಮಿಯ ಫಲವತ್ತಾದ ಮಣ್ಣನ್ನು ಇಟ್ಟಿಗೆ ಭಟ್ಟಿಯವರು ಬಳಸುವುದರಿಂದ ಫಲವತ್ತಾದ ಭೂಮಿ ಕಡಿಮೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಾದರೆ, ಇದಕ್ಕೆ ಯಾವ ಕ್ರಮ ಕೈಗೊಳ್ಳಲಾಗಿದೆ;

(ಈ) ಅದೇ ರೀತಿ ಕೃಷಿ ಯೋಗ್ಯ ಭೂಮಿಯನ್ನು ಗ್ರಾಮೀಣ ಪ್ರದೇಶ ಸೇರಿದಂತೆ ಅನೇಕ ಕಡೆ ಖಾಸಗಿಯವರು ನಿವೇಶನಗಳನ್ನಾಗಿ ಪರಿವರ್ತಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಇದನ್ನು ತಡೆಯುವ ನಿಟ್ಟಿನಲ್ಲಿ ಸರ್ಕಾರದಿಂದ ಜರುಗಿಸಲಾಗುತ್ತಿರುವ ಕ್ರಮಗಳೇನು?

## ರಾಜ್ಯ ಹೆದ್ದಾರಿಗಳನ್ನು ರಾಷ್ಟ್ರೀಯ ಹೆದ್ದಾರಿಗಳನ್ನಾಗಿ ಪರಿವರ್ತಿಸುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೪ (೨೦) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) SH–೨೦ ರಾಯಚೂರು–ಬಾರ್ಜಿ ರಸ್ತೆಯನ್ನು ಹಾಗೂ SH–೨೦ ಕಲ್ಮಲಾ ಕ್ರಾಸ್‌ನಿಂದ ಬುದಿಗುಂಪಾವರೆಗೂ ಹೋಗುವ ರಸ್ತೆಗಳನ್ನು ರಾಷ್ಟ್ರೀಯ ಹೆದ್ದಾರಿಯನ್ನಾಗಿ ಪರಿವರ್ತಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ೨೦೧೬–೧೭ರಲ್ಲಿ ರಾಯಚೂರು ಮಾನ್ವಿ ತಾಲ್ಲೂಕುಗಳಲ್ಲಿ ವಿವಿಧ ರಸ್ತೆಗಳ ಅಭಿವೃದ್ಧಿಗೆ ಸರ್ಕಾರ ನೀಡಿರುವ ಅನುದಾನ ಎಷ್ಟು; (ವಿವರ ನೀಡುವುದು)

(ಇ) NH–೧೬೭ ತುಂಗಭದ್ರಾ–ಮಂತ್ರಾಲಯ ಸೇತುವೆಯಿಂದ ಶಕ್ತಿನಗರ ಕೃಷ್ಣ ನದಿ ಸೇತುವೇವರೆಗೂ ರಸ್ತೆಯನ್ನು ಅಭಿವೃದ್ಧಿ ಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಈ) ೨೦೧೬–೧೭ರಲ್ಲಿ ರಾಯಚೂರು ಜಿಲ್ಲೆಗೆ ಲೋಕೋಪಯೋಗಿ ಇಲಾಖೆಯಿಂದ ವಿವಿಧ ಯೋಜನೆಗಳಿಗೆ ಮಂಜೂರಾತಿಯಾಗಿರುವ ಅನುದಾನ ಎಷ್ಟು? (ತಾಲ್ಲೂಕುವಾರು ವಿವರ ನೀಡುವುದು)

## ಮಾನ್ವಿ ಪಟ್ಟಣದಲ್ಲಿ NEKSRTC ಬಸ್ ಘಟಕ ನಿರ್ಮಾಣ ಮಾಡಲು ತೋಟಗಾರಿಕೆ ಜಾಗ ನೀಡುವ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೫ (೨೨) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ರಲ್ಲಿ ರಾಯಚೂರು ಜಿಲ್ಲೆಯಲ್ಲಿರುವ ಸರ್ಕಾರಿ ತೋಟಗಾರಿಕೆಗಳನ್ನು ಅಭಿವೃದ್ಧಿ ಮಾಡಲು ಸರ್ಕಾರ ನೀಡಿರುವ ಅನುದಾನ ಎಷ್ಟು;

(ಆ) ಮಾನ್ವಿ ಪಟ್ಟಣದಲ್ಲಿ NEKSRTC ಬಸ್ ಘಟಕ (Bus Depot) ನಿರ್ಮಾಣ ಮಾಡಲು ಸಾರಿಗೆ ಇಲಾಖೆಗೆ ತೋಟಗಾರಿಕೆ ಇಲಾಖೆಯ ಜಾಗ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

## ರಾಯಚೂರು ಕೃಷಿ ವಿಶ್ವವಿದ್ಯಾಲಯದ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೬ (೧೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರಿನಲ್ಲಿರುವ ಕೃಷಿ ವಿಶ್ವವಿದ್ಯಾಲಯುವನ್ನು ಅಭಿವೃದ್ಧಿಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ೨೦೧೬–೧೭ನೇ ಸಾಲಿನಲ್ಲಿ ಸದರಿ ವಿಶ್ವವಿದ್ಯಾಲಯವನ್ನು ಅಭಿವೃದ್ಧಿಗೊಳಿಸಲು ನೀಡಿರುವ ಅನುದಾನವೆಷ್ಟು;

(ಇ) ೨೦೧೬–೧೭ನೇ ಸಾಲಿನಲ್ಲಿ ಬೆಳೆ ಪರಿಹಾರಕ್ಕೆ ಖರ್ಚಾದ ಅನುದಾನವೆಷ್ಟು; ರೈತ ಫಲಾನುಭವಿಗಳ ಸಂಖ್ಯೆ ಎಷ್ಟು; ಬಾಕಿ ಉಳಿದಿರುವ ರೈತರಿಗೆ ಬೆಳೆ ಪರಿಹಾರ ಕೊಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? (ವಿವರ ನೀಡುವುದು)

## ರಾಯಚೂರು ಜಿಲ್ಲೆಯಲ್ಲಿ ನಿರ್ಮಾಣಗೊಂಡಿರುವ YTPS ನ ಮೊದಲನೆ ಯೂನಿಟ್ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೭ (೧೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿರುವ ನಿರ್ಮಾಣಗೊಂಡಿರುವ YTPS ಮೊದಲನೆ ಯುೂನಿಟ್ **(Unit) ಅನ್ನು ಎಂದಿನಿಂದ ಪ್ರಾರಂಭಗೊಳಿಸಲಾಗುವುದು;**

(ಆ) ಮಾನ್ವಿ ತಾಲ್ಲೂಕಿನಲ್ಲಿ ಬರುವ ಅಡವಿ, ಅಮರೇಶ್ವರ, ಹರವಿ ಹಾಗೂ ಕುರಕುಂದಾ ಗ್ರಾಮಗಳಲ್ಲಿ ಎಷ್ಟು ೧೧೦/೧೧ KV ಸಬ್ ಸ್ಟೇಷನ್‌ಗಳು ಮಂಜೂರಾತಿಯಾಗಿದೆ; ಹಾಗಿದ್ದಲ್ಲಿ, ಎಂದಿನಿಂದ ಟೆಂಡರ್ ಪ್ರಕ್ರಿಯೆ ಮುಗಿದಿದೆ;

(ಇ) ರಾಯಚೂರು ತಾಲ್ಲೂಕಿನಲ್ಲಿ ಬರುವ ಮಾಮಡಿದೊಡ್ಡಿ (ಕೂರ್ಲೆಕುಂಪ ಹತ್ತಿರ) GESCOM ವತಿಯಿಂದ ನಿರ್ಮಾಣದ ಹಂತದಲ್ಲಿರುವ ೩೩ KV ಸಬ್‌ಸ್ಟೇಷನ್ ನಿರ್ಮಾಣದ ಕಾಮಗಾರಿ ಕಳೆದ ೩ ವರ್ಷಗಳಿಂದ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಈ) ತಾಡ್ಲೂರು ಹತ್ತಿರ 110 K.V. ಸಬ್‌ಸ್ಟೇಷನ್‌ಗಳು ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಗುತ್ತಿಗೆ ಆಧಾರದ ನೌಕರರನ್ನು ಖಾಯಂಗೊಳಿಸುವ ಬಗ್ಗೆ

**ಶ್ರೀ ಬಸವರಾಜು ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೮ (೮೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮ ನಿಯಮಿತ (KREDL) ದಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿದ್ದ ೪೮ ಜನ ನೌಕರರ ಪೈಕಿ ಎಷ್ಟು ಜನರನ್ನು ಖಾಯಂಗೊಳಿಸಿ ಕಂಪನಿ ಸೇವೆಯಲ್ಲಿ ವಿಲೀನಗೊಳಿಸಲಾಯಿತು;

(ಆ) ಈ ವಿಲೀನ ಪ್ರಕ್ರಿಯೆಯಿಂದ ಕೈಬಿಟ್ಟ ಉಳಿದ ನಿಗಮದಲ್ಲಿ ವಿಲೀನಗೊಳಿಸಲು ಮಾನ್ಯ ಕರ್ನಾಟಕ ಉಚ್ಚನ್ಯಾಯಾಲಯವು ಯಾವ ದಿನಾಂಕದಂದು ಆದೇಶ ಹೊರಡಿಸಿದೆ;

(ಇ) ಮಾನ್ಯ ಕರ್ನಾಟಕ ಉಚ್ಚನ್ಯಾಯಾಲಯದ ಆದೇಶ ಪರಿಪಾಲಿಸಲು ಇರುವ ತೊಂದರೆಗಳೇನು;

(ಈ) ಈ ಕುರಿತು ಕಾನೂನು ಇಲಾಖೆ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮ ನಿಯಮಿತ (KREDL) ವು ಸರ್ಕಾರದ ಅಧೀನದಲ್ಲಿ ಬರುತ್ತದೆ ಎಂದು ೨ ಸಲ ಅಭಿಪ್ರಾಯ ವ್ಯಕ್ತಪಡಿಸಿರುವುದು ನಿಜವೇ;

(ಉ) ಹಾಗಿದ್ದಾಗ್ಯೂ ಕೂಡ ಉದ್ದೇಶಪೂರ್ವಕವಾಗಿ ವಿಲೀನ ಪ್ರಕ್ರಿಯೆಯನ್ನು ವಿಳಂಬಗೊಳಿಸಲು ಕಾರಣಗಳೇನು;

(ಊ) ಕೈಬಿಟ್ಟ ಉಳಿದ ಸಿಬ್ಬಂದಿಯನ್ನು ವಿಲೀನಗೊಳಿಸಲು ಸರ್ಕಾರ ಹಾಕಿಕೊಂಡ ಕಾಲಮಿತಿ ಯಾವುದು?

## ಸಾರ್ವಜನಿಕ ಉದ್ದಿಮೆಗಳ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೯ (ಲಿಖಿ) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸಾರ್ವಜನಿಕ ಉದ್ದಿಮೆಗಳು ಯಾವುವು; (ವಿವರವಾದ ಮಾಹಿತಿ ನೀಡುವುದು)

(ಆ) ಈ ಉದ್ದಿಮೆಗಳ ದೈನಂದಿನ ಆಡಳಿತ ಹಾಗೂ ಇತರೆ ಕೆಲಸಕಾರ್ಯಗಳಿಗೆ ಸಂಬಂಧಿಸಿದ ಆಡಳಿತ ಇಲಾಖೆಗಳಾವುವು; (ಉದ್ದಿಮೆವಾರು ವಿವರವಾದ ಮಾಹಿತಿ ನೀಡುವುದು)

(ಇ) ಈ ಸಾರ್ವಜನಿಕ ಉದ್ದಿಮೆಗಳಲ್ಲಿ ಅನುಕಂಪ ಆಧಾರಿತ ಹುದ್ದೆಗಳ ನೇಮಕಾತಿಗೆ ನಿರ್ಬಂಧ ಇರುವುದು ನಿಜವೇ;

(ಈ) ಹಾಗಿದ್ದಲ್ಲಿ, ಈ ನಿರ್ಬಂಧ ತೆರವುಗೊಳಿಸಲು ಸಾರ್ವಜನಿಕ ಉದ್ದಿಮೆಗಳು/ ಸಾರ್ವಜನಿಕ ಉದ್ದಿಮೆಗಳ ಇಲಾಖೆಯು ಕೈಗೊಂಡ ಕ್ರಮಗಳೇನು?

## ರಾಜ್ಯ ಹೆದ್ದಾರಿಯ ಮಾನದಂಡಗಳನ್ವಯ ರಸ್ತೆ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೨೦ (೮೨) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆ, ಗುಬ್ಬಿ ತಾಲ್ಲೂಕು, ಗುಬ್ಬಿ ನಗರದಿಂದ ಸಿ.ಎಸ್. ಪುರದವರೆಗೆ ನಿರ್ಮಾಣವಾಗುತ್ತಿರುವ ರಸ್ತೆಯು ರಾಜ್ಯ ಹೆದ್ದಾರಿಯೇ ಅಥವಾ ರಾಷ್ಟ್ರೀಯ ಹೆದ್ದಾರಿಯೇ;

(ಆ) ರಾಜ್ಯ ಹೆದ್ದಾರಿಯ ಮಾನದಂಡಗಳೇನು; (ವಿವರವಾದ ಮಾಹಿತಿ ನೀಡುವುದು)

(ಇ) ಸದರಿ ರಸ್ತೆಯನ್ನು ರಾಜ್ಯ ಹೆದ್ದಾರಿಯ ಮಾನದಂಡಗಳನ್ವಯ ನಿರ್ಮಾಣ ಮಾಡಲಾಗುತ್ತಿದೆಯೇ;

(ಈ) ಈ ಮಾನದಂಡಗಳನ್ನು ಉಲ್ಲಂಘಿಸಿ, ರಸ್ತೆಯನ್ನು ನಿಗಧಿತ ಅಗಲದಂತೆ ನಿರ್ಮಿಸದಿರುವುದು ನಿಜವೇ;

(ಉ) ಹಾಗಿದ್ದಲ್ಲಿ, ಈ ನ್ಯೂನ್ಯತೆಯನ್ನು ಸರಿಪಡಿಸಲು ಕೈಗೊಳ್ಳಲಿರುವ ಕ್ರಮಗಳೇನು?

## ನಗರೋತ್ಥಾನ ಯೋಜನೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧ (೫೬) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ನಗರೋತ್ಥಾನ ಯೋಜನೆಯಡಿಯಲ್ಲಿ ಎಷ್ಟು ನಗರಸಭೆ ಮತ್ತು ಇತರ ಸ್ಥಳೀಯ ಸಂಸ್ಥೆಗಳಿಗೆ ಎಷ್ಟೆಷ್ಟು ಅನುದಾನವನ್ನು ಒದಗಿಸಲಾಗಿದೆ; (ಕಳೆದ ೨ ವರ್ಷಗಳ ಮಾಹಿತಿ ನೀಡುವುದು)

(ಆ) ಸದರಿ ಯೋಜನೆಯಡಿಯಲ್ಲಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಿಗೆ ಒದಗಿಸಲಾಗಿರುವ ಹಣ ಎಷ್ಟು; ಆ ಪೈಕಿ ಎಷ್ಟು ಹಣ ಖರ್ಚಾಗಿದೆ;

(ಇ) ಸಾರ್ವಜನಿಕರಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ? (ಕಳೆದ ೨ ವರ್ಷಗಳಲ್ಲಿ ಆಗಿರುವ ಪ್ರಗತಿಯ ವಿವರ ನೀಡುವುದು)

## ತೋಟಗಾರಿಕೆಯ ಅಭಿವೃದ್ಧಿ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೨ (೫೮) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತೋಟಗಾರಿಕೆಯ ಸಮಗ್ರ ಅಭಿವೃದ್ಧಿಗೆ ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ; ಈ ಬಗ್ಗೆ ಸರ್ಕಾರದ ಮುಂದಿರುವ ಹೊಸ ಪ್ರಸ್ತಾವನೆಗಳಾವುವು;

(ಆ) ತೋಟಗಾರಿಕೆ ಉತ್ಪನ್ನಗಳ ಮಾರಾಟ ವ್ಯವಸ್ಥೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಇದು ಸಮರ್ಪಕವಾಗಿದೆಯೆ;

(ಇ) ತೋಟಗಾರಿಕಾ ಮಿಷನ್ ಕಾರ್ಯಕ್ರಮಗಳ ವಿವರಗಳೇನು; ಇದರಿಂದ ರೈತರಿಗೆ ಯಾವ ರೀತಿ ಉಪಯೋಗವಾಗುತ್ತದೆ?

## ಸ್ಪೀಡ್ ಬ್ರೇಕರ್‌ಗಳಿಂದ ಆಗುತ್ತಿರುವ ತೊಂದರೆ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩ (೫೭) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಲೋಕೋಪಯೋಗಿ ರಸ್ತೆಗಳ ಮೇಲೆ ವೇಗ ತಡೆಗಾಗಿ ಹಂಪ್ಸ್‌ಗಳನ್ನು ನಿರ್ಮಿಸಲು ಇರುವ ನಿಯಮಗಳೇನು;

(ಆ) ಹೆದ್ದಾರಿಗಳಲ್ಲಿ ಸ್ಪೀಡ್ ಬ್ರೇಕರ್ಸ್ ಹಾಕಬಾರದು ಎಂಬ ನಿಯಮವನ್ನು ಕೇಂದ್ರದ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯ ಜಾರಿಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ನಿಯಮಗಳ ಪ್ರಕಾರ ಸ್ಪೀಡ್ ಬ್ರೇಕರ್‌ಗಳಿಗೆ (ಹಂಪ್ಸ್) ಬಣ್ಣ ಹಚ್ಚದಿರುವುದರಿಂದ ಹಾಗೂ ಗುರುತಿನ ಫಲಕಗಳನ್ನು ಹಾಕದಿರುವುದರಿಂದ ಅಪಘಾತಗಳಾಗಿ ಜನರಿಗೆ ತೊಂದರೆಗಳಾಗುತ್ತಿರುವುದರಿಂದ ಇದರ ನಿವಾರಣೆಗೆ ಸರ್ಕಾರ ಯಾವ ಕ್ರಮ ಕೈಗೊಳ್ಳುತ್ತದೆ?

## ಹಾರ್ಟಿ ಬಜಾರ್ ಸ್ಥಾಪನೆ

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಕ್ಷೇತ್ರ):–**

೨೪ (೧೩೩) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಮಾಲ್‌ಗಳು ಬೆಂಗಳೂರಿನಲ್ಲಿ ತಲೆ ಎತ್ತಿದ ಕಾರಣದಿಂದ ಹಾಪ್‌ಕಾಮ್ಸ್ ವಹಿವಾಟು ಕುಂಠಿತಗೊಳ್ಳದಂತೆ ವೃದ್ಧಿ ಮಾಡುವ ಉದ್ದೇಶದಿಂದ ಪ್ರಾರಂಭಿಸಲು ಉದ್ದೇಶಿಸಿರುವ "ಹಾರ್ಟಿ ಬಜಾರ್"ನ ಪರಿಕಲ್ಪನೆಗಳ ಬಗ್ಗೆ ವಿವರ ನೀಡುವುದು.

(ಆ) ದೈನಂದಿನ ಹಣ್ಣು, ತರಕಾರಿ ಮತ್ತೀತರ ಪಾನೀಯಗಳ ದರಗಳನ್ನು ಮಾಲ್‌ಗಳಲ್ಲಿ ದೊರೆಯುವ ದರಕ್ಕಿಂತ ಕಡಿಮೆ ನಿಗಧಿಪಡಿಸಿ, ಈ ಹಾರ್ಟಿ ಬಜಾರ್‌ಗಳಲ್ಲಿ ಮಾರಾಟ ಮಾಡಲು ಸರ್ಕಾರ ಯೋಜನೆಯನ್ನೇನಾದರೂ ರೂಪಿಸಿದೆಯೇ;

(ಇ) ಮಹಿಳೆಯರ ಅನುಕೂಲಕ್ಕಾಗಿ, ತರಕಾರಿಗಳ ಮಾರಾಟದ ಮೇಲೆ ಸಬ್ಸಿಡಿ ಅಥವಾ ಡಿಸ್ಕೌಂಟ್ ನೀಡಲು ಹಾಪ್‌ಕಾಮ್ಸ್ ಚಿಂತಿಸುವುದೇ?

## ರಾಷ್ಟ್ರೀಯ ಹೆದ್ದಾರಿ ಪಕ್ಕದಲ್ಲಿ ಬರುವ ಹಳ್ಳಿಗಳಿಗೆ ಸೇವಾ ರಸ್ತೆ ತಡೆಗೋಡೆ Underpass ನಿರ್ಮಾಣ ಕುರಿತು.

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫ (೫೩) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಿರೀಸಾವೆಯಿಂದ ಹಾಸನದವರೆಗೆ ಬರುವ ರಾಷ್ಟ್ರೀಯ ಹೆದ್ದಾರಿಯ ನಡುವೆ ಬರತಕ್ಕ ಹಳ್ಳಿಗಳ ಪಕ್ಕದಲ್ಲಿ ಜನ ಜಾನುವಾರುಗಳು ಹಾಗೂ ವಾಹನಗಳ ಓಡಾಟದ ಅನುಕೂಲಕ್ಕಾಗಿ ತಡೆಗೋಡೆ ಮತ್ತು ಸೇವಾ ರಸ್ತೆ ನಿರ್ಮಿಸಲು ಕ್ರಮ ಕೈಗೊಳ್ಳಲಾಗುತ್ತಿದೆಯೇ; ಹಾಗಿದ್ದಲ್ಲಿ, ವಿವರಗಳನ್ನು ನೀಡುವುದು;

(ಆ) ಚನ್ನರಾಯಪಟ್ಟಣ ಶೆಟ್ಟಿಹಳ್ಳಿ ಡೈರಿಯಿಂದ ಬರಗೂರು ಹ್ಯಾಂಡ್‌ಪೋಸ್ಟ್ ಬೈ–ಪಾಸ್ ರಸ್ತೆಯಾಗಿದ್ದು, ಜನ ಜಾನುವಾರುಗಳು ಹಾಗೂ ವಾಹನಗಳ ಓಡಾಟಕ್ಕೆ ಅಂಡರ್‌ಪಾಸ್ (Underpass) ನಿರ್ಮಾಣ ಕಾಮಗಾರಿ ಕೈಗೊಳ್ಳಲು ಸರ್ಕಾರದ ವತಿಯಿಂದ ಕ್ರಮ ಕೈಗೊಳ್ಳಲಾಗಿದೆಯೇ; ಹಾಗೂ ಸದರಿ ರಸ್ತೆಯಲ್ಲಿ ದಿನನಿತ್ಯ ವಾಹನಗಳು ಅಪಘಾತಕ್ಕೆ ತುತ್ತಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

## ಗ್ರಾಮ ಪಂಚಾಯತ್‌ಗಳ ವಿದ್ಯುತ್ ಬಿಲ್ಲು ಬಾಕಿ ಮತ್ತು ಬಡ್ಡಿ ವಿನಾಯಿತಿ ನೀಡುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೬ (೪೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ವಿವಿಧ ಎಸ್ಕಾಂ ಎಸ್ಕಾಂಗಳಿಗೆ ಗ್ರಾಮ ಪಂಚಾಯತಿಯಿಂದ ಬಾಕಿ ಇರಿಸಿಕೊಂಡಿರುವ ಒಟ್ಟು ವಿದ್ಯುತ್ ಬಿಲ್ಲುಗಳ ಬಾಕಿ ಮೊತ್ತ ಎಷ್ಟು; (ಎಸ್ಕಾಂವಾರು ವಿವರ ನೀಡುವುದು) ಬಡ್ಡಿ ಮೊತ್ತ ಎಷ್ಟು;

(ಆ) ಕಳೆದ ೩ ವರ್ಷಗಳಲ್ಲಿ ರಾಜ್ಯದ ವಿವಿಧ ಎಸ್ಕಾಂಗಳಿಗೆ ಗ್ರಾಮ ಪಂಚಾಯತ್‌ಗಳಿಂದ ಪಾವತಿಯಾದ ವಿದ್ಯುತ್ ಬಿಲ್ಲುಗಳ ಮೊತ್ತ ಎಷ್ಟು; (ಎಸ್ಕಾಂವಾರು ವರ್ಷವಾರು ಮಾಹಿತಿ ನೀಡುವುದು)

(ಇ) ವಿವಿಧ ಗ್ರಾಮ ಪಂಚಾಯತಿಗಳ ವಿದ್ಯುತ್ ಬಿಲ್ಲು ಬಾಕಿ ಮತ್ತು ಬಡ್ಡಿ ಮೊತ್ತವನ್ನು ಒಂದು ಭಾರಿಯ ಮನ್ನಾ, ಒಂದು ಭಾರಿ ಸೆಟಲ್‌ಮೆಂಟ್ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇಲ್ಲವಾದಲ್ಲಿ, ಈ ಕುರಿತು ಸರ್ಕಾರದ ಯೋಚನೆ ಯೋಜನೆಗಳೇನು; (ವಿವರ ಒದಗಿಸುವುದು)

(ಈ) ಗ್ರಾಮ ಪಂಚಾಯತಿಗಳಿಗೆ ಕಡಿಮೆ ದರದಲ್ಲಿ ವಿದ್ಯುತ್ ಸರಬರಾಜು ಮಾಡುವುದು ಬಾಕಿ ಮೊತ್ತಕ್ಕೆ ಬಡ್ಡಿಯಿಂದ ವಿನಾಯಿತಿ ನೀಡುವುದು ಹಾಗೂ ಒಂದು ಬಾರಿಯ ಬಾಕಿ ಮನ್ನಾ ಮಾಡುವುದರಿಂದ ಸ್ಥಳೀಯ ಗ್ರಾಮ ಪಂಚಾಯತ್ ಹೊರೆ ಕಡಿಮೆ ಮಾಡಬಹುದು ಎನ್ನುವುದನ್ನು ಸರ್ಕಾರ ಗಮನಿಸಿಲ್ಲವೆ; ಈ ಬಗ್ಗೆ ಸರ್ಕಾರದ ನಿಲುವೇನು?

## ರಾಜ್ಯ ರಾಷ್ಟ್ರೀಯ ಹೆದ್ದಾರಿ ಯೋಜನೆಗಳ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೭ (೪೧) ಮಾನ್ಯ ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ವ್ಯಾಪ್ತಿಯಲ್ಲಿ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿ ಮತ್ತು ರಾಜ್ಯ ಹೆದ್ದಾರಿಗಳಾವುವು;

(ಆ) ಕಳೆದ ೫ ವರ್ಷಗಳಲ್ಲಿ ರಾಜ್ಯ ಹೆದ್ದಾರಿಗಳ ಅಭಿವೃದ್ಧಿಗೆ ಖರ್ಚಾದ ಅನುದಾನ ಎಷ್ಟು; (ಜಿಲ್ಲಾವಾರು ವಿಧಾನಸಭಾವಾರು ವಿವರ ನೀಡುವುದು)

(ಇ) SCP/TSP ಯೋಜನೆಯಡಿ ಕಳೆದ ೩ ವರ್ಷಗಳಲ್ಲಿ ಮಂಜೂರಾದ ಮತ್ತು ಖರ್ಚಾದ ಅನುದಾನ ಎಷ್ಟು; (ಜಿಲ್ಲೆ ವಿಧಾನಸಭಾವಾರು ವಿವರ ನೀಡುವುದು)

(ಈ) ಅತೀ ಹೆಚ್ಚಿನ ಮಳೆಯಾಗುವ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ದೀರ್ಘ ಬಾಳಿಕೆಯ ರಸ್ತೆ ನಿರ್ಮಾಣಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ಒದಗಿಸುವುದು)

## ಪೌರಾಡಳಿತ ಸ್ಥಳೀಯ ಸಂಸ್ಥೆಗಳಲ್ಲಿನ ಖಾಲಿ ಹುದ್ದೆ ಮತ್ತು ಸಮಾನ ಕೆಲಸ ಸಮಾನ ವೇತನ ಪಾವತಿ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೮ (೪೩) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಪುರಸಭೆ, ನಗರಸಭೆ, ಪಟ್ಟಣ ಪಂಚಾಯತ್‌ಗಳಲ್ಲಿ ಮಂಜೂರಾದ ಒಟ್ಟು ಹುದ್ದೆಗಳೆಷ್ಟು; ಖಾಲಿ ಇರುವ ಹುದ್ದೆಗಳೆಷ್ಟು; ಪ್ರಭಾರದಲ್ಲಿರುವ ಹುದ್ದೆಗಳೆಷ್ಟು; (ಹುದ್ದೆವಾರು, ಸ್ಥಳೀಯ ಸಂಸ್ಥೆವಾರು ವಿವರ ನೀಡುವುದು)

(ಆ) ರಾಜ್ಯದ ವಿವಿಧ ಪುರಸಭೆ ನಗರಸಭೆ ಪಟ್ಟಣ ಪಂಚಾಯತ್‌ಗಳಲ್ಲಿ ಕೆಲಸ ಮಾಡುತ್ತಿರುವ ಗುತ್ತಿಗೆ ಹೊರಗುತ್ತಿಗೆ ನೌಕರರ ಸಂಖ್ಯೆ ಎಷ್ಟು; (ಹುದ್ದೆವಾರು, ಸ್ಥಳೀಯ ಸಂಸ್ಥೆವಾರು ವಿವರ ನೀಡುವುದು)

(ಇ) ಗುತ್ತಿಗೆ ಹೊರ ಗುತ್ತಿಗೆ ಮತ್ತು ದಿನಗೂಲಿ ನೌಕರರಿಗೆ ಪ್ರಸಕ್ತ ನೀಡುತ್ತಿರುವ ವೇತನ ಎಷ್ಟು; (ಹುದ್ದೆವಾರು ವಿವರ ನೀಡುವುದು) ಸಮಾನ ಕೆಲಸಕ್ಕೆ ಸಮಾನ ವೇತನ ನಿಯಮವನ್ನು ಪಾಲಿಸಲಾಗುತ್ತಿದೆಯೇ; ಇಲ್ಲವಾದಲ್ಲಿ, ಇದಕ್ಕಿರುವ ತೊಡಕುಗಳೇನು; (ವಿವರ ನೀಡುವುದು)

(ಈ) ದಿನಗೂಲಿ ಗುತ್ತಿಗೆ ಹೊರ ಗುತ್ತಿಗೆ ನೌಕರರನ್ನು ಖಾಯಂಗೊಳಿಸಲು ಹಾಗೂ ಸಮಾನ ಕೆಲಸ ಸಮಾನ ವೇತನ ಪಾವತಿಸಲು ಸರ್ಕಾರದ ನಿಲುವೇನು; ಈ ಕುರಿತು ಯಾವ ಹಂತದಲ್ಲಿ ಯಾವ ಕ್ರಮ ಕೈಗೊಳ್ಳಲಿದೆ? (ವಿವರ ನೀಡುವುದು)

## ಗ್ರಾಮ ಪಂಚಾಯತ್ ಸೇರಿದಂತೆ ಸರ್ಕಾರಿ ಕಛೇರಿ ಕಟ್ಟಡಗಳಲ್ಲಿ ಸೋಲಾರ್ ರೂಫ್ ಟಾಪ್ ಅಳವಡಿಕೆ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೯ (೪೪) ಮಾನ್ಯ ಇಂಧನ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

(ಅ) ಸೋಲಾರ್ ವಿದ್ಯುತ್ ಉತ್ಪಾದನೆ ಪ್ರೋತ್ಸಾಹಕ್ಕೆ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಇರುವ ಯೋಜನೆಗಳೇನು; (ಸಂಪೂರ್ಣ ವಿವರ ಅರ್ಹತೆ ಮಾನದಂಡಗಳ ವಿವರ ನೀಡುವುದು)

(ಆ) ಸೋಲಾರ್ ರೂಫ್ ಟಾಪ್ ಯೋಜನೆಯ ವಿವರಗಳೇನು; ಯೋಜನೆಗಾಗಿ ಸ್ವೀಕೃತಗೊಂಡ ಅನುಮೋದನೆಗೊಂಡ ಅರ್ಜಿಗಳೇನು; ಪಿಪಿಎ ಮಾಡಿಕೊಂಡ ಪ್ರಕರಣಗಳೆಷ್ಟು; (ವಿವರ ನೀಡುವುದು)

(ಇ) ಗ್ರಾಮ ಪಂಚಾಯತ್ ಸೇರಿದಂತೆ ಸರ್ಕಾರಿ ಕಛೇರಿಗಳನ್ನು ಸೋಲಾರೀಕರಣ (ರೂಫ್ ಟಾಪ್ ಸೋಲಾರ್) ಯೋಜನೆಗೆ ಒಳಪಡಿಸಿಕೊಳ್ಳುವ ಕುರಿತು ಸರ್ಕಾರದ ನಿಲುವೇನು; (ಸಂಪೂರ್ಣ ವಿವರ ನೀಡುವುದು)

(ಈ) "ರೂಫ್ ಟಾಪ್ ಸೋಲಾರ್" ಅಳವಡಿಕೆಗೆ ಮುಂದೆ ಬರುವ ಸ್ಥಳೀಯ ಸಂಸ್ಥೆ (ಸರ್ಕಾರಿ)ಗಳಿಗೆ ಯಾವ ರೀತಿಯ ಸೌಲಭ್ಯ ಒದಗಿಸಲಾಗುವುದು? (ವಿವರ ನೀಡುವುದು)

## ಬೆಳಗಾವಿ ಜಿಲ್ಲೆಯ ಕೃಷಿ ಮಾರುಕಟ್ಟೆಗಳಲ್ಲಿ ಮೂಲಭೂತ ಸೌಲಭ್ಯಗಳಿಲ್ಲದೆ ಇರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦ (೪೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯ ಗಡೀ ಭಾಗದಲ್ಲಿರುವ ಕೃಷಿ ಮಾರುಕಟ್ಟೆಗಳಲ್ಲಿ ಸರಿಯಾದ ಮೂಲಭೂತ ಸೌಲಭ್ಯಗಳು ಇಲ್ಲದೇ ಇರುವುದರಿಂದ ಈ ಭಾಗದ ರೈತರು ನೆರೆಯ ಮಹಾರಾಷ್ಟ್ರದ ಕೃಷಿ ಮಾರುಕಟ್ಟೆಗೆ ಹೋಗಿ ದವಸ ಧಾನ್ಯಗಳನ್ನು ಮಾರಾಟ ಮಾಡುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಜಿಲ್ಲೆಯಲ್ಲಿರುವ ಒಟ್ಟು ಕೃಷಿ ಮಾರುಕಟ್ಟೆಗಳೆಷ್ಟು; ಅವುಗಳಿಂದ ಬರುವ ಆದಾಯವೆಷ್ಟು; (ಮಾರುಕಟ್ಟೆವಾರು ವಿವರ ನೀಡುವುದು)

(ಇ) ಸದರಿ ಕೃಷಿ ಮಾರುಕಟ್ಟೆಗಳಿಗೆ ಮೂಲಭೂತ ಸೌಲಭ್ಯ ಒದಗಿಸಲು ಸರ್ಕಾರವು ಏನು ಕ್ರಮಗಳನ್ನು ಕೈಗೊಂಡಿದೆ; (ವಿವರ ನೀಡುವುದು)

(ಈ) ಕೃಷಿ ಮಾರುಕಟ್ಟೆಗಳನ್ನು ಅಭಿವೃದ್ಧಿಪಡಿಸಲು ಸರ್ಕಾರವು ಮೀಸಲಿಟ್ಟಿರುವ ಅನುದಾನವೆಷ್ಟು; ಆ ಪೈಕಿ ಬಳಕೆಯಾದ ಅನುದಾನವೆಷ್ಟು? (ರಾಜ್ಯದ ಕೃಷಿ ಮಾರುಕಟ್ಟೆಗಳವಾರು ವಿವರ ನೀಡುವುದು)

## ಬೆಳಗಾವಿ ಜಿಲ್ಲೆಯಲ್ಲಿ ಪಶುಭಾಗ್ಯ ಯೋಜನೆ ಪರಿಣಾಮಕಾರಿಯಾಗಿ ಅನುಷ್ಠಾನಗೊಳ್ಳದೇ ಇರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೧ (೪೭) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯಲ್ಲಿ "ಪಶುಭಾಗ್ಯ ಯೋಜನೆ" ಯು ಪರಿಣಾಮಕಾರಿಯಾಗಿ ಅನುಷ್ಠಾನಗೊಳ್ಳದೇ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ೨೦೧೫–೧೬, ಹಾಗೂ ೨೦೧೬–೧೭ನೇ ಸಾಲಿನಲ್ಲಿ ಜಿಲ್ಲೆಯಲ್ಲಿ ನಿಗಧಿಪಡಿಸಿದ್ದ ಫಲಾನುಭವಿಗಳ ಗುರಿಯೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ೨೦೧೬–೧೭ನೇ ಸಾಲಿಗೆ ಬೆಳಗಾವಿ ಜಿಲ್ಲೆಯಲ್ಲಿ ಈವರೆಗೆ ಅರ್ಜಿ ಸಲ್ಲಿಸಿದ ಫಲಾನುಭವಿಗಳ ಸಂಖ್ಯೆ ಎಷ್ಟು; ಅದರಲ್ಲಿ ಆಯ್ಕೆಯಾದ ಫಲಾನುಭವಿಗಳ ಸಂಖ್ಯೆ ಎಷ್ಟು; ಉಳಿದ ಫಲಾನುಭವಿಗಳಿಗೆ ಯಾವಾಗ ಪಶುಭಾಗ್ಯ ಯೋಜನೆ ಲಾಭ ಸಿಗಲಿದೆ;

(ಈ) ರಾಜ್ಯದಲ್ಲಿ ಪಶುಭಾಗ್ಯ ಯೋಜನೆಯು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸರ್ಕಾರ ತೆಗೆದುಕೊಳ್ಳುವ ಮುಂದಿನ ಕ್ರಮಗಳೇನು? (ವಿವರ ನೀಡುವುದು)

## ಬರಗಾಲದಿಂದ ರೈತರ ಬೆಳೆಗಳು ಕೈಗೆ ಸಿಗದೆ ಹಾಕಿದ ಬಂಡವಾಳವು ನಷ್ಟವಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೨ (೫೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಭೀಕರ ಬರಗಾಲಕ್ಕೆ ತುತ್ತಾಗಿರುವ ರೈತರಿಗೆ ಜೀವನಾಧಾರ ಬೆಳೆಗಳು ಕೈ ಹತ್ತದೆ ಹಾಕಿದ ಬಂಡವಾಳವು ಮಣ್ಣಾಗಿ ರೈತರು ಕಂಗಾಲಾಗಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ರೈತರ ಬೆಳೆಗಳಿಗೆ ಸಂಬಂಧಿಸಿದಂತೆ ರಾಜ್ಯ ಕೃಷಿ ಬೆಲೆ ಆಯೋಗವು ಸದ್ಯದ ವಸ್ತು ಸ್ಥಿತಿ ಅಧ್ಯಯನ ಮಾಡಿ ವರದಿ ಸಿದ್ಧಪಡಿಸಿದೆಯೇ;

(ಇ) ಈ ವರದಿ ಪ್ರಕಾರ ರೈತರ ಬೆಳೆಗಳಿಗೆ ಪ್ರತಿ ಎಕರೆಗೆ ಉಂಟಾಗುತ್ತಿರುವ ನಷ್ಟವೆಷ್ಟು; ಯಾವ ಯಾವ ಬೆಳೆಗಳಿಗೆ ಎಷ್ಟೆಷ್ಟು ಪ್ರಮಾಣದಲ್ಲಿ ನಷ್ಟವುಂಟಾಗುತ್ತಿದೆ; (ವಿವರ ನೀಡುವುದು)

(ಈ) ಬೆಳೆ ನಷ್ಟದಿಂದ ಕಂಗಲಾದ ರೈತರಿಗೆ ಸರ್ಕಾರವು ಎಷ್ಟು ಪ್ರಮಾಣದಲ್ಲಿ ಪರಿಹಾರ ನೀಡಲಿದೆ; (ವಿವರ ನೀಡುವುದು)

(ಉ) ವೈಜ್ಞಾನಿಕವಾಗಿ ಈ ವರದಿಯಿಂದ ರಾಜ್ಯದ ರೈತರಿಗೆ ಯಾವ್ಯಾವ ರೀತಿಯಲ್ಲಿ ಪ್ರಯೋಜನವಾಗಲಿದೆ; ಸರ್ಕಾರವು ರಾಜ್ಯದ ರೈತರ ಸಮಸ್ಯೆಯನ್ನು ಬಗೆಹರಿಸುವ ನಿಟ್ಟಿನಲ್ಲಿ ಏನೇನು ಕ್ರಮಗಳನ್ನು ಕೈಗೊಂಡಿದೆ?

## ಬೆಳಗಾವಿ ಜಿಲ್ಲೆಯ ಅರಬಾವಿ ತೋಟಗಾರಿಕಾ ಸಂಶೋಧನಾ ಕೇಂದ್ರಕ್ಕೆ ಮೂಲ ಭೂತ ಸೌಲಭ್ಯ ಒದಗಿಸದೇ ಇರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೩ (೪೮) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯ ಅರಭಾವಿಯಲ್ಲಿರುವ ತೋಟಗಾರಿಕಾ ಸಂಶೋಧನಾ ಕೇಂದ್ರದಲ್ಲಿ ಅಗತ್ಯ ಮೂಲಭೂತ ಸೌಲಭ್ಯಗಳು

ಇಲ್ಲದೇ ಇರುವುದರಿಂದ ಸಂಶೋಧನ ನಿರತ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ತೋಟಗಾರಿಕಾ ಸಂಶೋಧನಾ ಕೇಂದ್ರಕ್ಕೆ ಮುಖ್ಯವಾಗಿ ನೀರಿನ ವ್ಯವಸ್ಥೆ ಸಂಶೋಧನೆಗೆ ಅಗತ್ಯವಿರುವ ಫಲವತ್ತಾದ ಭೂಮಿ ಹಾಗೂ ಅಗತ್ಯವಿರುವ ಸಲಕರಣೆಗಳನ್ನು ಒದಗಿಸಲು ಸರ್ಕಾರವು ಏನು ಕ್ರಮ ಕೈಗೊಂಡಿದೆ; (ವಿವರ ನೀಡುವುದು)

(ಇ) ಯಾವ ಕಾಲಮಿತಿಯೊಳಗೆ ತೋಟಗಾರಿಕಾ ಸಂಶೋಧನಾ ಕೇಂದ್ರಕ್ಕೆ ಪೂರಕ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗುವುದು;

(ಈ) ಇಲ್ಲಿ ಯಾವ ಯಾವ ತೋಟಗಾರಿಕಾ ಬೆಳೆಗಳ ಬಗ್ಗೆ ಸಂಶೋಧನೆ ಕೈಗೊಳ್ಳಲಾಗುತ್ತಿದೆ? (ಸಂಪೂರ್ಣ ವಿವರ ನೀಡುವುದು)

## ಅನಿಯಮಿತ ವಿದ್ಯುತ್ ಲೋಡ್ ಶೆಡ್ಡಿಂಗ್ ಮಾಡುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೪ (೪೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಬೇಸಿಗೆಗೂ ಮುನ್ನವೇ ಮುನ್ಸೂಚನೆಯಿಲ್ಲದೆ ಲೋಡ್ ಶೆಡ್ಡಿಂಗ್ ಮಾಡುತ್ತಿದ್ದು, ಇದರಿಂದ ಸಣ್ಣ ಕೈಗಾರಿಕೆಗಳು ವ್ಯಾಪಾರೋದ್ಯಮಗಳಿಗೆ ಹಾಗೂ ಹಲವು ವಲಯಗಳಲ್ಲಿ ಸಾರ್ವಜನಿಕರಿಗೆ ಉದ್ಯಮಿದಾರರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಈ ಅನಿಯಮಿತ ವಿದ್ಯುತ್ ಲೋಡ್ ಶೆಡ್ಡಿಂಗ್ ಸಮಸ್ಯೆಯನ್ನು ಬಗೆಹರಿಸಲು ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು;

(ಇ) ರಾಜ್ಯಕ್ಕೆ ಅವಶ್ಯಕವಿರುವ ಒಟ್ಟು ವಿದ್ಯುತ್ ಪೂರೈಕೆಯ ಪ್ರಮಾಣವೆಷ್ಟು; ರಾಜ್ಯದಲ್ಲಿ ಹಾಲಿ ಉತ್ಪಾದನೆಯಾಗುತ್ತಿರುವ ಒಟ್ಟು ವಿದ್ಯುತ್ ಪ್ರಮಾಣವೆಷ್ಟು; ಯಾವ ಯಾವ ಮೂಲಗಳಿಂದ ಎಷ್ಟೆಷ್ಟು ಪ್ರಮಾಣದಲ್ಲಿ ವಿದ್ಯುತ್ ಉತ್ಪಾದನೆಯಾಗುತ್ತಿದೆ; (ವಿವರ ನೀಡುವುದು)

(ಈ) ಅವಶ್ಯಕವಾಗಿ ಬೇಡಿಕೆಯಿರುವ ವಿದ್ಯುತ್ ಪೂರೈಕೆಯನ್ನು ಹೆಚ್ಚಿಸಲು ಯಾವ ಯಾವ ಮೂಲಗಳಿಂದ ವಿದ್ಯುತ್ ಉತ್ಪಾದನೆ ಮಾಡಲು ನಿರ್ಧರಿಸಿದೆ; ಎಷ್ಟು ಪ್ರಮಾಣದಲ್ಲಿ ವಿದ್ಯುತ್ ಉತ್ಪಾದನೆಯ ಗುರಿ ಇಟ್ಟಿಕೊಂಡಿದೆ; ಹೊರ ರಾಜ್ಯಗಳಿಂದ ಖರೀದಿಸುತ್ತಿರುವ ವಿದ್ಯುತ್ ಪ್ರಮಾಣವೆಷ್ಟು; ಸಂದಾಯವಾಗುತ್ತಿರುವ ಮೊತ್ತವೆಷ್ಟು? (ವಿವರ ನೀಡುವುದು)

## ಪಶು ವೈದ್ಯರು ಹಾಗೂ ನಿರೀಕ್ಷಕರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಕೆ.ಸಿ.ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೫ (೫೧) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಳ್ಳಾರಿ ಜಿಲ್ಲೆಯಲ್ಲಿರುವ ಒಟ್ಟು ಪಶು ಚಿಕಿತ್ಸಾಲಯಗಳ ಸಂಖ್ಯೆ ಎಷ್ಟು;

(ಆ) ಇಲ್ಲಿ ಕಾರ್ಯನಿರ್ವಹಿಸುತ್ತಿರುವ ಪಶು ವೈದ್ಯರು ಮತ್ತು ನಿರೀಕ್ಷಕರ ಸಂಖ್ಯೆ ಎಷ್ಟು; ವೈದ್ಯರ ಮತ್ತು ನಿರೀಕ್ಷಕರ ಕೊರತೆಯ ಸಂಖ್ಯೆ ಎಷ್ಟು;

(ಇ) ಸಂಚಾರಿ ಪಶು ಚಿಕಿತ್ಸಾಲಯವನ್ನು ಒದಗಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ?

## ರಾಜ್ಯದಲ್ಲಿ ವಿದ್ಯುತ್ ಕಡಿತದಿಂದ ಉಂಟಾಗುತ್ತಿರುವ ಸಮಸ್ಯೆಗಳ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೩೬ (೫೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ವರ್ಷ ಮಳೆ ಕೊರತೆಯಿಂದಾಗಿ ರಾಜ್ಯದ ಬಹುತೇಕ ಡ್ಯಾಂಗಳಲ್ಲಿ ನೀರು ಕಡಿಮೆಯಾಗುತ್ತಿದ್ದು, ವಿದ್ಯುತ್ ಉತ್ಪಾದನೆ ಕಡಿಮೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ರಾಜ್ಯದಲ್ಲಿ ವಿಶೇಷವಾಗಿ ನಗರ ವ್ಯಾಪ್ತಿಯಲ್ಲಿ ವಿದ್ಯುತ್ ಕೊರತೆ ಈಗಾಗಲೇ ಆರಂಭವಾಗಿದ್ದು, ಮುಂಬರುವ ದಿನಗಳಲ್ಲಿ ಅತ್ಯಂತ ಗಂಭೀರ ಪರಿಸ್ಥಿತಿ ಉಂಟಾಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ;

(ಇ) ಮಾರ್ಚ್, ಏಪ್ರಿಲ್ ತಿಂಗಳಲ್ಲಿ ಶಾಲಾ–ಕಾಲೇಜುಗಳ ಪರೀಕ್ಷೆಗಳು ಪ್ರಾರಂಭವಾಗುತ್ತಿದ್ದು, ವಿದ್ಯುತ್ ಕಡಿತದಿಂದ ಮಕ್ಕಳ ವಿದ್ಯಾಭ್ಯಾಸಕ್ಕೆ ತೊಂದರೆಯಾಗುತ್ತಿರುವುದರ ಬಗ್ಗೆ ಸರ್ಕಾರ ಚಿಂತಿಸಿದೆಯೇ;

(ಈ) ಈ ಎಲ್ಲಾ ಸಮಸ್ಯೆಗಳಿಗೆ ಸರ್ಕಾರ ಯಾವ ತರಹದ ಪರಿಹಾರ ಕಾರ್ಯಕ್ರಮಗಳನ್ನು ಕೈಗೊಳ್ಳಲಿದೆ?

## ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹೆದ್ದಾರಿ ಹಾಗೂ ಜಿಲ್ಲಾ ಮುಖ್ಯ ರಸ್ತೆಗಳ ಬದಿಗಳಲ್ಲಿ ಕಟ್ಟಡಗಳನ್ನು ನಿರ್ಮಾಣ ಮಾಡುವಾಗ ಅನುಸರಿಸುತ್ತಿರುವ ಮಾನದಂಡದ ಬಗ್ಗೆ.

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೩೭ (೬೦) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹೆದ್ದಾರಿ ಹಾಗೂ ಜಿಲ್ಲಾ ಮುಖ್ಯ ರಸ್ತೆಗಳ ಬದಿಗಳಲ್ಲಿ ಕಟ್ಟಡಗಳನ್ನು ನಿರ್ಮಾಣ ಮಾಡುವಾಗ ಅನುಮತಿ ನೀಡಲು ಇರುವ ಮಾನದಂಡಗಳೇನು;

(ಆ) ಕಟ್ಟಡಗಳಿಗೆ ಅನುಮತಿ ನೀಡುವಾಗ ಈ ಮಾನದಂಡಗಳನ್ನು ಅನುಸರಿಸದೇ ಇರುವುದರಿಂದ, ಉಂಟಾಗುತ್ತಿರುವ ಸಮಸ್ಯೆಗಳು ಸರಕಾರದ ಗಮನದಲ್ಲಿದೆಯೇ; (ವಿವರ ನೀಡುವುದು)

(ಇ) ಈ ಸಮಸ್ಯೆಗಳ ಕುರಿತು ಸರ್ಕಾರ ಗಮನಹರಿಸಿದೆಯೇ; ಸಮಸ್ಯೆಗಳ ಪರಿಹಾರಕ್ಕೆ ಕೈಗೊಂಡಿರುವ ಕ್ರಮಗಳೇನು;

(ಈ) ಪ್ರಸ್ತುತ ಇರುವ ಮಾನದಂಡಗಳನ್ನು ಕಡ್ಡಾಯವಾಗಿ ಅನುಷ್ಠಾನಗೊಳಿಸಲು ಸರಕಾರ ಯಾವ ಕ್ರಮ ಕೈಗೊಳ್ಳಲಿದೆ?

## ರಾಜ್ಯದಲ್ಲಿರುವ ತೋಟಗಾರಿಕಾ ಫಾರ್ಮಗಳನ್ನು ಖಾಸಗೀಕರಣಗೊಳಿಸುವ ಯೋಜನೆ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೩೮ (೬೦) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ತೋಟಗಾರಿಕಾ ಫಾರ್ಮ್‌ಗಳ ಸಂಖ್ಯೆ ಎಷ್ಟು;

(ಆ) ಅವುಗಳಲ್ಲಿ ಎಷ್ಟು ಫಾರ್ಮ್‌ಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆ; ದುಸ್ಥಿತಿಯಲ್ಲಿರುವ ಫಾರ್ಮ್‌ಗಳ ಸಂಖ್ಯೆ ಎಷ್ಟು;

(ಇ) ಈ ತೋಟಗಾರಿಕಾ ಫಾರ್ಮ್‌ಗಳನ್ನು ಖಾಸಗೀಕರಣಗೊಳಿಸುವ ಯೋಜನೆ ಸರ್ಕಾರದ ಮುಂದಿದೆಯೇ;

(ಈ) ಇದ್ದಲ್ಲಿ, ಇದಕ್ಕೆ ಕಾರಣಗಳೇನು; ಹಾಗೂ ಖಾಸಗೀಕರಣದ ರೂಪುರೇಷೆಗಳ ಬಗ್ಗೆ ವಿವರ ನೀಡುವುದು?

## ಪಡುಬಿದ್ರೆ ಕಾರ್ಕಳವನ್ನು ಸಂಪರ್ಕಿಸುವ ರಾಜ್ಯ ಹೆದ್ದಾರಿಯ ಅಗಲೀಕರಣದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೩೯ (೬೩) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಡುಬಿದ್ರೆ ಕಾರ್ಕಳವನ್ನು ಸಂಪರ್ಕಿಸುವ ರಾಜ್ಯ ಹೆದ್ದಾರಿಯನ್ನು ಯಾವಾಗ ಅಗಲೀಕರಣಗೊಳಿಸಿ ಅಭಿವೃದ್ಧಿಪಡಿಸಲಾಯಿತು; (ಟೆಂಡರ್ ವಿವರ, ಕಾಮಗಾರಿ ವಿವರ, ಖರ್ಚಾದ ಒಟ್ಟು ಮೊತ್ತ ಮತ್ತು ಪೂರ್ಣಗೊಳಿಸುವ ಸಮಯಗಳ ವಿವರಗಳನ್ನು ನೀಡುವುದು)

(ಆ) ಈ ರಸ್ತೆಯಲ್ಲಿ ರಸ್ತೆ ಉಬ್ಬು (Humps) ಗಳನ್ನು ನಿರ್ಮಿಸುವುದು ಟೆಂಡರ್ ಪ್ರಕ್ರಿಯೆಯ ಒಂದು ಭಾಗವಾಗಿರುವುದೇ; ರಾಷ್ಟ್ರೀಯ ಹೆದ್ದಾರಿ ನಿರ್ಮಾಣದ ಮಾನದಂಡಗಳ ಪ್ರಕಾರ ಹೆದ್ದಾರಿಗಳಲ್ಲಿ ರಸ್ತೆ ಉಬ್ಬು (Humps) ಗಳನ್ನು ನಿರ್ಮಿಸಲು ಅನುಮತಿ ಇದೆಯೇ;

(ಇ) ಪಡುಬಿದ್ರೆ ಕಾರ್ಕಳ ನಡುವೆ ಹೆದ್ದಾರಿ ನಿರ್ಮಾಣಗೊಂಡು, ಉಪಯೋಗಿಸಲು ಪ್ರಾರಂಭಿಸಿದ ಅನೇಕ ತಿಂಗಳುಗಳ ನಂತರ ಏಕಾಏಕಿ ರಸ್ತೆ (Humps) ಉಬ್ಬುಗಳನ್ನು ನಿರ್ಮಿಸುವ ಅವೈಜ್ಞಾನಿಕ ನಿರ್ಣಯಗಳನ್ನು ಕೈಗೊಳ್ಳಲು ಕಾರಣಗಳೇನು;

(ಈ) ಈ ರೀತಿ ಎಷ್ಟು ರಸ್ತೆ ಉಬ್ಬುಗಳನ್ನು ನಿರ್ಮಿಸಲಾಗಿದೆ ?

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿಯ ವಿದ್ಯುತ್ ಅವಶ್ಯಕತೆಯನ್ನು ಪೂರೈಸಲು ವಿಶೇಷ ವಿದ್ಯುತ್ ಉತ್ಪಾದನಾ ಘಟಕವನ್ನು ಸ್ಥಾಪಿಸುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೪೦ (೬೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಎಲ್ಲಾ ರೀತಿಯ ಉಪಯೋಗಗಳಿಗೆ ಸೇರಿದಂತೆ ಅಗತ್ಯವಿರುವ ವಿದ್ಯುತ್ ಪ್ರಮಾಣವೆಷ್ಟು;

(ಆ) ಎಷ್ಟು ಅಗತ್ಯವಿರುವ ಪ್ರಮಾಣದ ವಿದ್ಯುತ್ತನ್ನು ಯಾವ ಮೂಲಗಳಿಂದ ಸರಬರಾಜು ಮಾಡಲಾಗುತ್ತಿದೆ;

(ಇ) ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ವಿದ್ಯುತ್ತಿನ ಅಗತ್ಯತೆ (Demand) ಹಾಗೂ ಪೂರೈಕೆ (Supply) ಯಲ್ಲಿ ಕೊರತೆ ಇದೆಯೇ; ಇದ್ದಲ್ಲಿ ವಿವರ ನೀಡುವುದು;

(ಈ) ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿಯ ವಿದ್ಯುತ್ ಅವಶ್ಯಕತೆಯನ್ನು ಪೂರೈಸಲು ಅಗತ್ಯವಿರುವಂತೆ ಒಂದು ವಿಶೇಷ ವಿದ್ಯುತ್ ಉತ್ಪಾದನಾ ಘಟಕವನ್ನು ಸ್ಥಾಪಿಸಲು ಸರಕಾರದ ಮುಂದಿರುವ ಯೋಜನೆಗಳು ಯಾವುವು; ಈ ಯೋಜನೆಗಳು ಯಾವ ಹಂತದಲ್ಲಿವೆ; ಈ ಯೋಜನೆಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು; ಈ ಯೋಜನೆಗಳ ಅಂದಾಜು ವೆಚ್ಚ ಬಿಡುಗಡೆಯಾಗಿರುವ ಹಣ, ಪೂರ್ಣಗೊಳಿಸಿರುವ ಕಾಮಗಾರಿಗಳ ವಿವರಗಳನ್ನು ನೀಡುವುದು?

## ಕೃಷಿ ಬೆಳೆ ಹಾನಿಯ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ದಕ್ಷಿಣ ಪದವೀಧರರ ಕ್ಷೇತ್ರ) :–**

೪೧ (೮೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಬರಗಾಲ ಮತ್ತು ನೀರಿನ ಅಭಾವದಿಂದ ಮುಂಗಾರು ಋತುವಿನ ಎಷ್ಟು ಕೃಷಿ ಬೆಳೆ ಹಾನಿಯಾಗಿದೆ;

(ಆ) ಹಾನಿಗೊಳಗಾದ ಕೃಷಿ ಬೆಳೆ ಪರಿಹಾರಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಎಷ್ಟು ಜನ ರೈತರು ಬೆಳೆ ಪರಿಹಾರಕ್ಕಾಗಿ ಅರ್ಜಿಯನ್ನು ಸಲ್ಲಿಸಿದ್ದಾರೆ;

(ಈ) ಒಂದು ಎಕರೆ ಜಮೀನಿನಲ್ಲಿ ಹಾನಿಗೊಳಗಾದ ಬೆಳೆಗೆ–ಸರ್ಕಾರ ಎಷ್ಟು ಮೊತ್ತದ ಪರಿಹಾರವನ್ನು ನೀಡಲು ಚಿಂತಿಸಿದೆ;

(ಉ) ಯಾವಾಗ ರೈತರಿಗೆ ಬೆಳೆ ಪರಿಹಾರವನ್ನು ನೀಡಲಾಗುತ್ತದೆ;

(ಊ) ತ್ವರಿತಗತಿಯಲ್ಲಿ ಬೆಳೆ ಪರಿಹಾರ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು?

## ಪಶು ಆಸ್ಪತ್ರೆಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ದಕ್ಷಿಣ ಪದವೀಧರರ ಕ್ಷೇತ್ರ) :–**

೪೨ (೭೯) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಪಶು ಆಸ್ಪತ್ರೆಗಳಿವೆ;

(ಆ) ಇದ್ದಲ್ಲಿ, ಸ್ವಂತ ಕಟ್ಟಡ ಹೊಂದಿರುವ ಆಸ್ಪತ್ರೆಗಳ ಸಂಖ್ಯೆ ಹಾಗೂ ಸ್ವಂತ ಕಟ್ಟಡ ಹೊಂದಿಲ್ಲದ ಆಸ್ಪತ್ರೆಗಳ ಸಂಖ್ಯೆ ಎಷ್ಟು;

(ಇ) ಸ್ವಂತ ಕಟ್ಟಡ ಹೊಂದಿಲ್ಲದ ಆಸ್ಪತ್ರೆಗಳಿಗೆ ಸ್ವಂತ ಕಟ್ಟಡವನ್ನು ನಿರ್ಮಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

## ಪಶು ವೈದ್ಯಾಧಿಕಾರಿಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ದಕ್ಷಿಣ ಪದವೀಧರರ ಕ್ಷೇತ್ರ) :–**

೪೩ (೮೦) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮಂಜೂರಾಗಿರುವ ಪಶು ವೈದ್ಯರ ಹುದ್ದೆಗಳೆಷ್ಟು;

(ಆ) ಇದರಲ್ಲಿ ಖಾಲಿ ಇರುವ ಹುದ್ದೆಗಳು ಎಷ್ಟು;

(ಇ) ಖಾಲಿ ಹುದ್ದೆಗಳ ಭರ್ತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ಯಾವಾಗ ಭರ್ತಿ ಮಾಡಲಾಗುವುದು?

## ವಿದ್ಯುತ್ ಅಭಾವ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೪ (೮೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಿದ್ಯುತ್ ಅಭಾವ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ರಾಜ್ಯದ ವಿದ್ಯುತ್ ಅಭಾವವನ್ನು ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ರಾಜ್ಯದಲ್ಲಿ ಉಂಟಾಗಿರುವ ವಿದ್ಯುತ್ ಅಭಾವನ್ನು ನೀಗಿಸಲು ಸರ್ಕಾರ ಬೇರೆ ಯಾವುದಾದರೂ ಮೂಲಗಳಿಂದ ವಿದ್ಯುತ್ ಉತ್ಪಾದಿಸಲು ಕ್ರಮ ಕೈಗೊಂಡಿದೆಯೇ;

(ಈ) ಹಾಗಿದ್ದಲ್ಲಿ, ಯಾವ ಯಾವ ಮೂಲಗಳಿಂದ ಎಷ್ಟು ಪ್ರಮಾಣದ (ವಿದ್ಯುತ್ತನ್ನು) ಉತ್ಪಾದಿಸಲಾಗುತ್ತದೆ? (ವಿವರಗಳನ್ನು ನೀಡುವುದು)

## ಲೋಕೋಪಯೋಗಿ ಇಲಾಖೆ ಕೈಗೊಂಡ ಕಾಮಗಾರಿಗಳ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೫ (೮೫) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ಕಳೆದ ಮೂರು ವರ್ಷಗಳಿಂದ ಲೋಕೋಪಯೋಗಿ ಇಲಾಖೆಯಿಂದ ಕೈಗೊಂಡ ಕಾಮಗಾರಿಗಳು ಯಾವುವು;

(ಆ) ಯಾವ ಯಾವ ಲೆಕ್ಕ ಶೀರ್ಷಿಕೆಗಳಡಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ, ಆ ಪೈಕಿ ಪೂರ್ಣಗೊಂಡು ಗುತ್ತಿಗೆದಾರರಿಗೆ ಹಣ ಪಾವತಿಯಾಗದೆ ಬಾಕಿಯಿರುವ ಬಿಲ್ಲುಗಳ ಮೊತ್ತವೆಷ್ಟು; (ಲೆಕ್ಕ ಶೀರ್ಷಿಕೆವಾರು ಮತ್ತು ಕಾಮಗಾರಿವಾರು ಹಾಗೂ ಜಿಲ್ಲಾವಾರು ವಿವರಗಳನ್ನು ನೀಡುವುದು)

(ಇ) ಕಳೆದ ಮೂರು ವರ್ಷಗಳಿಂದ ಗುತ್ತಿಗೆದಾರರಿಗೆ ಬಿಡುಗಡೆ ಮಾಡಿರುವ ಕಾಮಗಾರಿಗಳ ಬಿಲ್ಲುಗಳ ಮೊತ್ತವೆಷ್ಟು; (ವರ್ಷವಾರು ಮತ್ತು ಕಾಮಗಾರಿಗಳವಾರು ಮಾಹಿತಿ ನೀಡುವುದು)

(ಈ) ಪ್ರಸ್ತುತ ಈಗ ಬಾಕಿಯಿರುವ ಬಿಲ್ಲುಗಳ ಮೊತ್ತವೆಷ್ಟು; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಉ) ಗುತ್ತಿಗೆದಾರರಿಗೆ ಸಮಯಕ್ಕೆ ಸರಿಯಾಗಿ ಬಿಲ್ಲಿನ ಹಣವನ್ನು ಪಾವತಿಸದೆ ಇರುವುದರಿಂದ ಗುತ್ತಿಗೆದಾರರು ತೊಂದರೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಊ) ಹಾಗಿದ್ದಲ್ಲಿ, ಈ ಗುತ್ತಿಗೆದಾರರಿಗೆ ಸಕಾಲದಲ್ಲಿ ಕಾಮಗಾರಿಗಳ ಬಿಲ್ಲಿನ ಮೊತ್ತವನ್ನು ಪಾವತಿಸಲು ಸರ್ಕಾರಕ್ಕಿರುವ ತೊಂದರೆಗಳೇನು;

(ಎ) ಹಾಗಿದ್ದಲ್ಲಿ, ಬಾಕಿ ಇರುವ ಗುತ್ತಿಗೆದಾರರ ಬಿಲ್ಲಿನ ಮೊತ್ತವನ್ನು ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ;

(ಏ) ಹಾಗಿದ್ದಲ್ಲಿ, ಬಾಕಿ ಮೊತ್ತವನ್ನು ಯಾವಾಗ ಮತ್ತು ಎಷ್ಟು ಪ್ರಮಾಣದಲ್ಲಿ ಬಿಡುಗಡೆ ಮಾಡಲಾಗುವುದು? (ವಿವರಗಳನ್ನು ನೀಡುವುದು)

## ಸಾಲಭಾದೆ ಹಾಗೂ ಬೆಳೆ ನಷ್ಟದಿಂದ ಆತ್ಮಹತ್ಯೆ ಮಾಡಿಕೊಂಡ ರೈತರ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೬ (೮೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಸಾಲಭಾದೆ ಹಾಗೂ ಬೆಳೆ ನಷ್ಟದಿಂದ ಆತ್ಮಹತ್ಯೆ ಮಾಡಿಕೊಂಡ ರೈತರ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಸಾಲಭಾದೆ ಹಾಗೂ ಬೆಳೆ ನಷ್ಟದಿಂದ ಆತ್ಮಹತ್ಯೆ ಮಾಡಿಕೊಂಡ ರೈತರ ಪ್ರತಿ ಕುಟುಂಬಗಳಿಗೆ ಸರ್ಕಾರ ನೀಡಿರುವ ಪರಿಹಾರ ಮೊತ್ತವೆಷ್ಟು; (ವಿವರಗಳನ್ನು ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ರೈತರ ಆತ್ಮಹತ್ಯೆಯ ಪರಿಹಾರಕ್ಕಾಗಿ ಕೇಂದ್ರ ಸರ್ಕಾರ ನೀಡಿದ ಪರಿಹಾರ ಧನದ ಮೊತ್ತವೆಷ್ಟು? (ವಿವರಗಳನ್ನು ನೀಡುವುದು)

## ಸೌರ ವಿದ್ಯುತ್ ಯೋಜನೆ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೭ (೦೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸೌರ ವಿದ್ಯುತ್ ಯೋಜನೆಯಡಿ ಎಷ್ಟು ಮೆಗಾವಾಟ್ ವಿದ್ಯುತ್ ಉತ್ಪಾದಿಸಲು ಕೇಂದ್ರ ಸರ್ಕಾರದಿಂದ ಅನುಮತಿಯನ್ನು ಪಡೆಯಲಾಗಿದೆ; ಎಷ್ಟು ಜನ ರೈತರಿಗೆ ಪವರ್ ಪರ್ಚೇಸ್ ಅಗ್ರಿಮೆಂಟ್ (P.P.A.) ನೀಡಲಾಗಿದೆ; ಈ ಯೋಜನೆಯಡಿಯಲ್ಲಿ ರೈತರಿಂದ ಖರೀದಿಸುವ ಒಂದು ಯೂನಿಟ್ ವಿದ್ಯುತ್‌ಗೆ ನೀಡುವ ಹಣವೆಷ್ಟು; ರೈತರಿಗೆ ಈ ಯೋಜನೆಯಿಂದ ದೊರಕುವ ಸವಲತ್ತುಗಳಾವುವು;

(ಆ) ನವೀಕರಿಸಬಹುದಾದ ವಿದ್ಯುತ್‌ನ ಪ್ರೋತ್ಸಾಹಕ್ಕಾಗಿ ಸಾರ್ವಜನಿಕರ ಕಛೇರಿಯ ಮೇಲ್ಛಾವಣಿಗಳಲ್ಲಿ ಸೌರ ವಿದ್ಯುತ್ ಉತ್ಪಾದಿಸುವ ಬಗ್ಗೆ ಸರ್ಕಾರದ ನಿಲುವೇನು ಮತ್ತು ಸರ್ಕಾರಿ ಕಛೇರಿಗಳಲ್ಲಿ ಸೌರ ವಿದ್ಯುತ್ ಬಳಕೆಗೆ ಸರ್ಕಾರದ ಕಾರ್ಯ ಯೋಜನೆಗಳೇನು; ಸಾರ್ವಜನಿಕರಲ್ಲಿ ವಿದ್ಯುತ್ ಉಳಿತಾಯದ ಬಗ್ಗೆ ಜಾಗೃತಿ ಮೂಡಿಸಲು ಸರ್ಕಾರದ ಯೋಜನೆಗಳಾವುವು;

(ಇ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಇಂಧನ ಇಲಾಖೆಯಲ್ಲಿ ಈ ಸೌರ ವಿದ್ಯುತ್ ಯೋಜನೆಯುಡಿಯುಲ್ಲಿ ಪಿ.ಪಿ.ಎ. ಮಾಡಿಕೊಂಡವರ ಸಂಖ್ಯೆ ಎಷ್ಟು? (ವಿವರ ಒದಗಿಸುವುದು)

## ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ಮಾರ್ಗ ವಿಸ್ತರಣೆ ಮಾಡುವ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೮ (೦೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರೈತರ ಕೃಷಿ ನೀರಾವರಿ ಪಂಪ್‌ಸೆಟ್ ಸ್ಥಾವರಗಳಿಗೆ ಇಲಾಖಾವತಿಯಿಂದ ಮಾರ್ಗ ವಿಸ್ತರಣೆಗಾಗಿ ಅಂದಾಜು ಪಟ್ಟಿ ತಯಾರಿಸುವಲ್ಲಿ ತಲಾ ಎಚ್.ಪಿ.ಗೆ ೧೦ ಸಾವಿರದಂತೆ ದರ ನಿಗದಿ ಯಾವಾಗ ಮಾಡಲಾಯಿತು; (ಪ್ರತಿ ಒದಗಿಸುವುದು)

(ಆ) ಪ್ರಸ್ತುತ ಹೊಸದರ ಸೂಚನೆಯಂತೆ ಮಾರ್ಗ ವಿಸ್ತರಣೆಗೆ ಅಂದಾಜು ಪಟ್ಟಿ ತಯಾರಿಸುವಲ್ಲಿ ದರ ನಿಗಧಿ ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ;

(ಇ) ಇಲ್ಲವಾದಲ್ಲಿ, ಹಿಂದಿನ ದರ ಪಟ್ಟಿಯಿಂದ ರೈತರಿಗೆ ಹೊರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರದ ಚಿಂತನೆ ಏನು?

## ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೯ (೦೩) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯ, ಕುಂದಾಪುರ ತಾಲ್ಲೂಕಿನ ಹಾಲ್ಕಲ್ (ಕೊಲ್ಲೂರು) ಸೋಮೇಶ್ವರ ರಾಜ್ಯ ಹೆದ್ದಾರಿಯನ್ನು ಉನ್ನತೀಕರಿಸಿ ರಾಷ್ಟ್ರೀಯ ಹೆದ್ದಾರಿ ಪೂರ್ವಾನುಮತಿಯ ಮೇರೆಗೆ ಮಂಜೂರಾತಿಯಾಗಿರುವುದು ನಿಜವೇ; ಹಾಗಿದ್ದಲ್ಲಿ, ಸರ್ವೆಕಾರ್ಯವನ್ನು ಪ್ರಾರಂಭಿಸಲಾಗಿದೆಯೇ; ಈ ಕಾಮಗಾರಿಯನ್ನು ಪೂರ್ಣಗೊಳಿಸಲು ಸರ್ಕಾರದಿಂದ ನಿಗಧಿಪಡಿಸಿದ ಕಾಲಮಿತಿ ಯಾವುದು;

(ಆ) ಉಡುಪಿ ಜಿಲ್ಲೆಯ, ಕುಂದಾಪುರ ಬಾಳಿಬರೆ–ತೀರ್ಥಹಳ್ಳಿ ರಾಜ್ಯ ಹೆದ್ದಾರಿಯನ್ನು ರಾಷ್ಟ್ರೀಯ ಹೆದ್ದಾರಿಯನ್ನಾಗಿ ಮೇಲ್ದರ್ಜೆಗೆ ಏರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಸರ್ವೆಕಾರ್ಯವನ್ನು ಪ್ರಾರಂಭಿಸಲಾಗಿದೆಯೇ; ಈ ಕಾಮಗಾರಿಯನ್ನು ಪೂರ್ಣಗೊಳಿಸಲು ಸರ್ಕಾರದಿಂದ ನಿಗಧಿಪಡಿಸಿದ ಕಾಲಮಿತಿ ಯಾವುದು;

(ಇ) ಉಡುಪಿ ಜಿಲ್ಲೆಯ ಕೋಟೇಶ್ವರ ಸೋಮೇಶ್ವರ, ಬಾಳೆಹೊನ್ನೂರು ರಾಜ್ಯ ಹೆದ್ದಾರಿಯನ್ನು ರಾಷ್ಟ್ರೀಯ ಹೆದ್ದಾರಿಯನ್ನಾಗಿ ಮೇಲ್ದರ್ಜೆಗೆ ಏರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಈ) ಹಾಗಿದ್ದಲ್ಲಿ, ಸರ್ವೆ ಕಾರ್ಯವನ್ನು ಪ್ರಾರಂಭಿಸಲಾಗಿದೆಯೇ; ಈ ಕಾಮಗಾರಿಯನ್ನು ಪೂರ್ಣಗೊಳಿಸಲು ಸರ್ಕಾರದಿಂದ ನಿಗಧಿಪಡಿಸಿದ ಕಾಲಮಿತಿಯಾವುದು?

## ರಸ್ತೆ ಮತ್ತು ಸೇತುವೆಗಳ ನಿರ್ಮಾಣದ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೦ (೦೨) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಿಗೆ ಕಳೆದ ಮೂರೂವರೆ ವರ್ಷಗಳಲ್ಲಿ ವಿವಿಧ ಯೋಜನೆಯಡಿಯಲ್ಲಿ ಮಂಜೂರಾದ ಹಾಗೂ ಮಂಜೂರು ಮಾಡಲು ಉದ್ದೇಶಿಸಿರುವ ಸೇತುವೆಗಳೆಷ್ಟು; ಅವುಗಳಿಗೆ ತಗಲುವ ಅಂದಾಜು ವೆಚ್ಚವೆಷ್ಟು; (ಮಾಹಿತಿ ನೀಡುವುದು)

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಿಗೆ ಕಳೆದ ಮೂರೂವರೆ ವರ್ಷಗಳಲ್ಲಿ ವಿವಿಧ ಯೋಜನೆಗಳಿಂದ ಮಂಜೂರಾದ ರಸ್ತೆಗಳೆಷ್ಟು; ಅವು ಯಾವುವು; ಅವುಗಳಿಗೆ ತಗುಲಿದ ಅಂದಾಜು ವೆಚ್ಚವೆಷ್ಟು? (ಮಾಹಿತಿ ನೀಡುವುದು)

41

## ಬೀಜೋತ್ಪಾದನಾ ಕೇಂದ್ರದಲ್ಲಿ ಘನತ್ಯಾಜ್ಯ ಘಟಕ ತೆರೆಯುವ ಹುನ್ನಾರದ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೧ (೦೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕುಂದಾಪುರ ತಾಲ್ಲೂಕಿನ ಬೀಜೋತ್ಪಾದನಾ ಕೇಂದ್ರ ಕೋಟೇಶ್ವರದಲ್ಲಿ ತ್ಯಾಜ್ಯ ಸಂಗ್ರಹಣಾ ಘಟಕ ಸ್ಥಾಪಿಸುವ ಹಂತದಲ್ಲಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ;

(ಆ) ಬೀಜೋತ್ಪಾದನಾ ಕೇಂದ್ರ ಕೋಟೇಶ್ವರದಲ್ಲಿ ಹಸಿರು ತ್ಯಾಜ್ಯವನ್ನು ಗೊಬ್ಬರಕ್ಕಾಗಿ ಬಳಸುವ ಯೋಜನೆಗಾಗಿ ಹಸಿರು ತ್ಯಾಜ್ಯವನ್ನು ಶೇಖರಿಸುವ ಉದ್ದೇಶ ಹೊಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ನಂತರದ ದಿನಗಳಲ್ಲಿ ಹಸಿರು ತ್ಯಾಜ್ಯದಿಂದ ಘನತ್ಯಾಜ್ಯವನ್ನು ಸಂಗ್ರಹಣ ಮಾಡುವ ಹುನ್ನಾರ ಇದೆ ಎನ್ನುವ ಭೀತಿ ರೈತರಲ್ಲಿ ಮೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಿಂದಿನ ಸರ್ಕಾರಗಳು ಸದ್ದುದೇಶದಲ್ಲಿ ಬೀಜೋತ್ಪಾದನೆಗಾಗಿ ಕಾಯ್ದಿರಿಸಿದ ಸ್ಥಳವನ್ನು ಬೀಜೋತ್ಪಾದನೆ ಮಾಡುವ ಸವಾಲನ್ನು ಹೊರತುಪಡಿಸಿ ಬೇರೆ ಬೇರೆ ಉದ್ದೇಶಗಳಿಗಾಗಿ ಸ್ಥಳದಾನ ಮಾಡುವ ಇಲಾಖಾ ಕಾರ್ಯವೈಖರಿಯು ರೈತ ವಿರೋಧಿ ಧೋರಣೆಯಾಗಿರುವುದಿಲ್ಲವೇ?

## ಕುಡಿಯುವ ನೀರಿನ ಘಟಕಗಳ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೨ (೦೭) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಗರ ಸಭೆಗಳು, ಪುರ ಸಭೆಗಳು ಮತ್ತು ಪಟ್ಟಣ ಪಂಚಾಯಿತಿಗಳಿಗೆ ಕುಡಿಯುವ ನೀರಿನ ಘಟಕಗಳನ್ನು ಸರ್ಕಾರದಿಂದ ನಿರ್ಮಾಣ ಮಾಡುತ್ತಿರುವುದು ನಿಜವೇ;

(ಆ) ಹಾಗಿದ್ದರೆ, ಕಳೆದ ೪ ವರ್ಷಗಳಲ್ಲಿ ಅಂದರೆ ಏಪ್ರಿಲ್ ೨೦೧೩ ರಿಂದ ಇದುವರೆವಿಗೆ ಎಷ್ಟು ಕುಡಿಯುವ ನೀರಿನ ಘಟಕಗಳನ್ನು ಮಂಜೂರು ಮಾಡಲಾಗಿದೆ; ಎಷ್ಟು ಘಟಕಗಳು ಪೂರ್ಣಗೊಂಡು ಕುಡಿಯುವ ನೀರನ್ನು ಒದಗಿಸಲಾಗುತ್ತಿದೆ; ಬಾಕಿ ಇರುವ ಘಟಕಗಳ ಸಂಖ್ಯೆ ಎಷ್ಟು; ಸದರಿ ಘಟಕಗಳ ಕಾಮಗಾರಿ ಪ್ರಗತಿ ಯಾವ ಹಂತದಲ್ಲಿದೆ? (ಸ್ಥಳೀಯವಾರು ಪೂರ್ಣ ವಿವರವನ್ನು ಒದಗಿಸುವುದು)

## ಎಪಿಎಂಸಿ ನಿರ್ವಹಣೆ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೩ (೦೮) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ಎಪಿಎಂಸಿ (ಕೃಷಿ ಮಾರುಕಟ್ಟೆ ಸಮಿತಿ) ಗಳ ಸಂಖ್ಯೆ ಎಷ್ಟು; (ಪೂರ್ಣ ವಿವರವನ್ನು ಒದಗಿಸುವುದು) ಇವುಗಳಲ್ಲಿ ಯಾವ ಯಾವ ಎಪಿಎಂಸಿಗಳಲ್ಲಿ ರೈತರಿಗೆ ಅನುಕೂಲವಾಗುವಂತೆ ತೂಕದ ಯಂತ್ರಗಳನ್ನು ಅಳವಡಿಸಲಾಗಿದೆ; ಇದಕ್ಕೆ ತಗಲಿರುವ ವೆಚ್ಚ ಎಷ್ಟು;

(ಆ) ಪ್ರಸ್ತುತ ಎಷ್ಟು ಎಪಿಎಂಸಿಗಳಲ್ಲಿ ತೂಕದ ಯಂತ್ರಗಳು ಕಾರ್ಯನಿರ್ವಹಿಸುತ್ತಿವೆ ಮತ್ತು ನಿಷ್ಕ್ರಿಯಗೊಂಡಿರುವ ತೂಕದ ಯಂತ್ರಗಳ ಸಂಖ್ಯೆ ಎಷ್ಟು; ನಿಷ್ಕ್ರಿಯಗೊಂಡಿರುವ ತೂಕದ ಯಂತ್ರಗಳ ದುರಸ್ಥಿಗಾಗಿ ತೆಗೆದುಕೊಂಡಿರುವ ಕ್ರಮವೇನು; (ವಿವರವನ್ನು ನೀಡುವುದು) ಖಾಸಗಿಯವರಿಗೆ ಯಾವ ಯಾವ ಎಪಿಎಂಸಿಯಲ್ಲಿ ತೂಕದ ಯಂತ್ರವನ್ನು (ಲೀವ್ & ಲೈಸನ್ಸ್) ಟೆಂಡರ್ ಮುಖಾಂತರ ನೀಡಲಾಗಿದೆ; ಹಾಗೂ ಇದರಿಂದ ಎಪಿಎಂಸಿಗೆ ಮಾಸಿಕ ಬರುವ ಆದಾಯ ಎಷ್ಟು; (ವಿವರ ನೀಡುವುದು)

(ಇ) ಯಶವಂತಪುರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯಲ್ಲಿ ಇವರೆವಿಗೆ ಒಟ್ಟು ಲೈಸನ್ಸ್‌ಗಳನ್ನು (ಪರವಾನಗಿ) ನೀಡಲಾಗಿದೆ; (ಪೂರ್ಣ ವಿವರಗಳನ್ನು ನೀಡುವುದು)

(ಈ) ಕಳೆದ ೩ ವರ್ಷಗಳಿಂದ ಲೈಸನ್ಸ್ ಹೊಂದಿರುವ ಎಷ್ಟು ಅಂಗಡಿ ಅಥವಾ ಗೋದಾಮುಗಳ ಅಡಿಟಿಂಗ್ ಮಾಡಲಾಗಿದೆ? (ಸಂಪೂರ್ಣ ಮಾಹಿತಿ ನೀಡುವುದು)

## ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳಲ್ಲಿ ಸ್ವೈಪಿಂಗ್ ಮಿಷಿನ್ ಅಳವಡಿಸಿರುವ ಬಗ್ಗೆ

**ಶ್ರೀ ಎಂ.ಕೆ. ಪ್ರಾಣೇಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೪ (೨೩) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಎಲ್ಲಾ ನಗರ ಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳಲ್ಲಿ ಸ್ವೈಪಿಂಗ್ ಮಿಷಿನ್ ಮತ್ತು ಆನ್‌ಲೈನ್ ವ್ಯವಸ್ಥೆಯನ್ನು ಜಾರಿಗೆ ತರುವ ಯೋಜನೆ ಸರ್ಕಾರದ ಮುಂದಿದೆಯೇ; (ವಿವರಣೆ ನೀಡುವುದು)

(ಆ) ಇಲ್ಲಿಯವರೆಗೆ ಚಿಕ್ಕಮಗಳೂರು ಜಿಲ್ಲೆಯ ಎಷ್ಟು ನಗರ ಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳಲ್ಲಿ ಸ್ವೈಪಿಂಗ್ ಮಿಷಿನ್ ಮತ್ತು ಆನ್‌ಲೈನ್ ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆ; (ವಿವರಣೆ ನೀಡುವುದು)

(ಇ) ಸ್ವೈಪಿಂಗ್ ಮಿಷಿನ್ ಮತ್ತು ಆನ್‌ಲೈನ್ ವ್ಯವಸ್ಥೆಯನ್ನು ಜಾರಿಗೆ ತರುವ ಬಗ್ಗೆ ನಗರಾಭಿವೃದ್ಧಿ ಇಲಾಖೆ ಯಾವುದಾದರೂ ಆದೇಶ ಹೊರಡಿಸಿದೆಯೇ? (ವಿವರಣೆ ನೀಡುವುದು)

## ಮುಂಬಡ್ತಿ ಪಡೆದಿರುವ ಅಧಿಕಾರಿಗಳ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೫ (೨೪) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ನಾಲ್ಕು ವರ್ಷಗಳಿಂದ ಲೋಕೋಪಯೋಗಿ ಇಲಾಖೆಯಲ್ಲಿ ಲೋಕಾಯುಕ್ತ ಪ್ರಕರಣ, ಹಣ ದುರುಪಯೋಗ, ಇಲಾಖಾ ವಿಚಾರಣೆಗಳನ್ನು ಎದುರಿಸುತ್ತಿರುವ ಅಧಿಕಾರಿ/ನೌಕರರುಗಳ ಸಂಖ್ಯೆ ಎಷ್ಟು; (ಮಾಹಿತಿ ಒದಗಿಸುವುದು)

(ಆ) ಹಾಗಿದ್ದಲ್ಲಿ, ದೋಷಾರೋಪಪಟ್ಟಿ ಜಾರಿಯಾಗಿದ್ದರೂ ಮುಂಬಡ್ತಿ ಪಡೆದಿರುವ ಅಧಿಕಾರಿಗಳ ಸಂಖ್ಯೆ ಎಷ್ಟು; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಸಹಾಯಕ ಕಾರ್ಯಪಾಲಕ ಇಂಜಿನಿಯರ್ ವೃಂದದಿಂದ ಮುಖ್ಯ ಇಂಜಿನಿಯರ್ ವೃಂದದಲ್ಲಿ ಇಲಾಖಾ ವಿಚಾರಣೆ ಎದುರಿಸುತ್ತಿದ್ದು,

ಮುಂಬಡ್ತಿ ಹೊಂದಿರುವ ಅಧಿಕಾರಿಗಳ ಸಂಖ್ಯೆ ಎಷ್ಟು ಹಾಗೂ ಮುಂಬಡ್ತಿ ಪಡೆದು ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳ ಹೆಸರು ಮತ್ತು ಸ್ಥಳ ಯಾವುದು? (ಸಂಪೂರ್ಣ ವಿವರ ನೀಡುವುದು)

## ನೆಲದಡಿಯ ಒಳಚರಂಡಿಗೆ ಮಂಜೂರಾದ ಅನುದಾನ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೬ (೨೫) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ ಹಾಗೂ ೨೦೧೬–೧೭ನೇ ಸಾಲಿನಲ್ಲಿ ಬೀದರ ನಗರದಲ್ಲಿ ನೆಲದಡಿಯ ಒಳಚರಂಡಿ ವ್ಯವಸ್ಥೆ ನಿರ್ಮಾಣ ಪುನರ್ ನಿರ್ಮಾಣಕ್ಕಾಗಿ ಮಂಜೂರು ಮಾಡಿರುವ ಅನುದಾನವೆಷ್ಟು; (ಕಾಮಗಾರಿವಾರು, ವರ್ಷಾವಾರು ವಿವರ ನೀಡುವುದು)

(ಆ) ಈವರೆಗೆ ವ್ಯಯಿಸಲಾದ ವೆಚ್ಚವೆಷ್ಟು; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಇ) ಸದರಿ ಕಾಮಗಾರಿಗಳನ್ನು ನಿರ್ವಹಿಸುತ್ತಿರುವ ಗುತ್ತಿಗೆದಾರರು ಯಾರ್‍ಯಾರು; (ವಿವರ ಒದಗಿಸುವುದು)

(ಈ) ನೆಲದಡಿಯ ಒಳಚರಂಡಿ ಕಾಮಗಾರಿಗಳು ಮಂದಗತಿಯಲ್ಲಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಕಾರಣಗಳೇನು;

(ಉ) ಅಸಮರ್ಪಕ ಹಾಗೂ ಅವ್ಯವಸ್ಥಿತ ಕಾಮಗಾರಿ ನಿರ್ವಹಣೆಯಿಂದಾಗಿ ಬೀದರ್ ನಗರದ ಪರಿಸರ ಕಲುಷಿತಗೊಂಡು

ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು? (ಪರಿಹಾರದ ಬಗ್ಗೆ ವಿವರಗಳನ್ನು ಒದಗಿಸುವುದು)

## ಇಲಾಖೆ ವತಿಯಿಂದ ಬಿಡುಗಡೆ ಮಾಡಿದ ಅನುದಾನ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೭ (೨೮) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಗೆ ೨೦೧೫–೧೬ ಹಾಗೂ ೨೦೧೬–೧೭ನೇ ಸಾಲಿನಲ್ಲಿ ಇಲಾಖೆ ವತಿಯಿಂದ ಲೆಕ್ಕ ಶೀರ್ಷಿಕೆ–೩೦೫೪ (ಯೋಜನೆ ಹಾಗೂ ಯೋಜನೇತರ) ಹಾಗೂ ಲೆಕ್ಕ ಶೀರ್ಷಿಕೆ–೫೦೫೪ (ಯೋಜನೆ ಹಾಗೂ ಯೋಜನೇತರ) ಅಡಿಯಲ್ಲಿ ಬಿಡುಗಡೆಯಾಗಿರುವ, ಖರ್ಚಾಗಿರುವ ಮತ್ತು ಉಳಿಕೆಯಾಗಿರುವ ಅನುದಾನವೆಷ್ಟು; (ವಿಧಾನಸಭಾ ಕ್ಷೇತ್ರವಾರು ಹಾಗೂ ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ವಿಧಾನಸಭಾ ಕ್ಷೇತ್ರವಾರು ಅನುದಾನ ಬಿಡುಗಡೆ ಮಾಡುವಾಗ ಕ್ಷೇತ್ರವಾರು ತಾರತಮ್ಯವಾಗಿದೆಯೇ;

(ಇ) ಹಾಗಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ರಾಜ್ಯದಲ್ಲಿ ವಿದ್ಯುತ್ ಬೇಡಿಕೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮ (೨೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯಕ್ಕೆ ಪ್ರತಿದಿನ ಅವಶ್ಯಕವಿರುವ ವಿದ್ಯುತ್ ಬೇಡಿಕೆ ಎಷ್ಟು;

(ಆ) ಪ್ರಸ್ತುತ ಪೂರೈಕೆಯಾಗುತ್ತಿರುವ ವಿದ್ಯುತ್ ಪ್ರಮಾಣವೆಷ್ಟು;

(ಇ) ಕೊರತೆಯನ್ನು ನೀಗಿಸಲು ಸರ್ಕಾರವು ಹಮ್ಮಿಕೊಂಡಿರುವ ಯೋಜನೆಗಳೇನು;

(ಈ) ಬೀದರ್ ಜಿಲ್ಲೆಗೆ ಪ್ರತಿದಿನ ಅವಶ್ಯಕವಿರುವ ವಿದ್ಯುತ್ ಪ್ರಮಾಣ ಎಷ್ಟು? (ಸಂಪೂರ್ಣ ವಿವರ ನೀಡುವುದು)

## ಹನಿ ನೀರಾವರಿ ಯೋಜನೆಗೆ ನೀಡಿರುವ ಅನುದಾನದ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೯ (೨೭) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ನೇ ಸಾಲಿನಲ್ಲಿ ರಾಜ್ಯದಲ್ಲಿನ ಹನಿ ನೀರಾವರಿ ಯೋಜನೆಗೆ ನೀಡಿರುವ ಅನುದಾನವೆಷ್ಟು;

(ಆ) ಸದರಿ ಅನುದಾನದಲ್ಲಿ ಕೇಂದ್ರ ಸರ್ಕಾರದ ಅನುದಾನ ಸೇರಿದ್ದಲ್ಲಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು;

(ಇ) ಯಾವ ಯಾವ ಮಾನದಂಡಗಳನ್ನು ಅನುಸರಿಸಿ ರೈತರುಗಳಿಗೆ ಈ ಯೋಜನೆಯ ಸಬ್ಸಿಡಿಯನ್ನು ನೀಡಲಾಗುತ್ತದೆ? (ಸಂಪೂರ್ಣ ವಿವರ ನೀಡುವುದು)

## ಪಶುಸಂಗೋಪನಾ ಇಲಾಖೆಯಲ್ಲಿ ಆಗಿರುವ ಅವ್ಯವಹಾರದ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೬೦ (೩೩) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬರಗಾಲದ ಹಿನ್ನೆಲೆಯಲ್ಲಿ ರಾಜ್ಯದ ೧೭೬ ತಾಲ್ಲೂಕುಗಳ ಜಾನುವಾರುಗಳಿಗೆ ಮೇವು ಬೆಳೆಯಲು ಪಶುಸಂಗೋಪನಾ ಇಲಾಖೆಯಿಂದ ಕರೆದ ಟೆಂಡರ್‌ನಲ್ಲಿ ನಮೂದಿಸಲಾದ ಮೇವಿನ ಬೀಜಗಳ ಮತ್ತು ಅವುಗಳ ಬೆಲೆ ಎಷ್ಟು; (ವಿವರ ನೀಡುವುದು)

(ಆ) ರೈತರಿಗೆ ವಿತರಿಸಿರುವ ಮೇವಿನ ಬೀಜಗಳು ಯಾವುವು ; (ಬೀಜಗಳ ವಿವರ ಮತ್ತು ಬೆಲೆಗಳ ವಿವರ ನೀಡುವುದು)

(ಇ) ಈ ಸಂಬಂಧ ಕಳಪೆ ಮತ್ತು ಕಡಿಮೆ ಮೌಲ್ಯದ ಮೇವಿನ ಬೀಜ ವಿತರಣೆ ಮಾಡಿರುವ ಕುರಿತು ಬಳ್ಳಾರಿ ಜಿಲ್ಲೆಯ ರೈತ ಮುಖಂಡರಿಂದ ದೂರು ಬಂದಿರುವುದು ನಿಜವೇ ; ಬಂದಿದ್ದಲ್ಲಿ, ಈ ಸಂಬಂಧ ಕೈಗೊಂಡಿರುವ ಕ್ರಮಗಳೇನು ?

## ರಾಯಚೂರು ನಗರ ಸಭೆಯ ಲಾಂಛನ ಕಲ್ಲಾನೆಯ ಶಿಲೆಯನ್ನು ಸ್ವಚ್ಛ ಮತ್ತು ಸುರಕ್ಷಿತವಾಗಿಟ್ಟುಕೊಳ್ಳುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೬೧ (೩೨) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ನಗರ ಸಭೆಗೆ ಲಾಂಛನವಿರುವುದೇ ; ಇದ್ದಲ್ಲಿ ವಿವರ ಮತ್ತು ವಿಶೇಷತೆಯನ್ನು ತಿಳಿಸಿ ;

(ಆ) ನಗರ ಸಭೆಯ ಲಾಂಛನವಾಗಿ ಮಾಡಿಕೊಂಡಿರುವ ಕಲ್ಲಾನೆಯು ರಾಯಚೂರಿನ ನಗರ ಸಭೆಯ ವ್ಯಾಪ್ತಿಯಲ್ಲಿ ಬರುವುದೇ ; ಈ ಕಲ್ಲಾನೆಯ ಸುತ್ತ ಕಸ ಹಾಕುವುದು ಮತ್ತು ಶುಚಿತ್ವವನ್ನು ಕಾಪಾಡದೆ ಹೊಲಸು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸದರಿ ಕಲ್ಲಾನೆಯ ಶಿಲ್ಪದ ಮೇಲೆ ಬ್ಯಾನರ್ ಮತ್ತು ಬಂಟಿಂಗ್ಸ್‌ಗಳನ್ನು ಕಟ್ಟುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ಕಲ್ಲಾನೆಯ ಶಿಲೆಯನ್ನು ಸುರಕ್ಷಿತಗೊಳಿಸಲು ಸರ್ಕಾರ ಯಾವ ರೀತಿಯ ಕ್ರಮ ಕೈಗೊಳ್ಳುವುದು ?

## ಬೆಸ್ಕಾಂ ಎಸ್–೫ ವ್ಯಾಪ್ತಿಯ ಉತ್ತರಹಳ್ಳಿ ಗ್ರಾಮದಲ್ಲಿ ಹಳೆಯ ಲೈನುಗಳನ್ನು ತೆರವುಗೊಳಿಸುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೬೨ (೩೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಸ್ಕಾಂ ಎಸ್–೫ ವ್ಯಾಪ್ತಿಯಲ್ಲಿ ಬರುವ ಕೆಂಗೇರಿಯಿಂದ ಸುಬ್ರಹ್ಮಣ್ಯಪುರ ಉಪವಿಭಾಗಕ್ಕೆ ಈ ಹಿಂದೆ ಸರಬರಾಜಾಗುತ್ತಿದ್ದ, ೧೧ ಕೆ.ವಿ. ವಿದ್ಯುತ್ ಲೈನ್ ಉತ್ತರಹಳ್ಳಿ ಗ್ರಾಮದ ೩ ಮತ್ತು ೪ನೇ ಮುಖ್ಯರಸ್ತೆಯ ಕೊನೆಯಲ್ಲಿರುವ ಮನೆಗಳ ಗೋಡೆಗಳ ಮೇಲೆ ಹಾಗೂ ಮೇಲ್ಛಾವಣೆಗೆ ಅಂಟಿದಂತೆ ಹಾದುಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಹಳೆಯ ಲೈನನ್ನು ತುರ್ತು ಸಮಯದಲ್ಲಿನ ಪರ್ಯಾಯ ವ್ಯವಸ್ಥೆಗೆಂದು ಮೀಸಲಿಟ್ಟಿರುವುದು ನಿಜವೇ ; ಇಲ್ಲವಾದಲ್ಲಿ ಅದನ್ನು ತೆಗೆಯದಿರಲು ಕಾರಣವೇನು ;

(ಆ) ಪರ್ಯಾಯ ವ್ಯವಸ್ಥೆಗೆ ಇಟ್ಟಿರುವುದು ನಿಜವಾಗಿದ್ದಲ್ಲಿ, ಅಕಸ್ಮಾತ್ ಬೆಸ್ಕಾಂನಿಂದ ವಿದ್ಯುತ್ ಪ್ರವಹಿಸಿದರೆ, ಇದರಿಂದ ಅಲ್ಲಿನ ನಿವಾಸಿಗಳಿಗೆ ಪ್ರಾಣಾಪಾಯವಾಗುವುದಿಲ್ಲವೆ ; ಈ ಸಮಸ್ಯೆಯನ್ನು ಪರಿಹರಿಸಲು ಇರುವ ಮಾರ್ಗೋಪಾಯವೇನು ;

(ಇ) ಇದರಿಂದಾಗಿ ಅಲ್ಲಿನ ನಿವಾಸಿಗಳು ಭಯಭೀತರಾಗಿದ್ದು, ಪ್ರಾಣಾಪಾಯಕ್ಕೆ ಈಡಾಗುವ ಸಂದರ್ಭವಿರುವುದರಿಂದ ಕೂಡಲೇ ಇದನ್ನು ಮುಖ್ಯರಸ್ತೆಗೆ ವರ್ಗಾಯಿಸಲು ಸೂಕ್ತ ಕ್ರಮ ಕೈಗೊಳ್ಳಲಾಗುವುದೇ ;

(ಈ) ಈ ಅಪಾಯದ ಪರಿಸ್ಥಿತಿಯನ್ನು ಹೋಗಲಾಡಿಸಲು ಬೇಕಾಗುವ ಕಾಲಾವಧಿ ಎಷ್ಟು ?

## ಕೇಂದ್ರ ಸರ್ಕಾರವು ಅಡಿಕೆಗೆ ಬೆಂಬಲ ಬೆಲೆ ಘೋಷಣೆ ಮಾಡಿದ್ದರೂ ಅಡಿಕೆ ಖರೀದಿಯಲ್ಲಿ ವಿಳಂಬವಾಗಿರುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೬೩ (೨೯) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೇಂದ್ರ ಸರ್ಕಾರ ಅಡಿಕೆಗೆ ಬೆಂಬಲ ಬೆಲೆ ಘೋಷಣೆ ಮಾಡಿದ್ದು ಯಾವಾಗ ; ಯಾವ ಯಾವ ಅಡಿಕೆಗೆ ಯಾವ ಬೆಲೆ ಘೋಷಣೆ ಮಾಡಲಾಗಿದೆ ; (ವಿವರ ನೀಡುವುದು)

(ಆ) ಬೆಂಬಲ ಬೆಲೆ ನಿಗಧಿಯಾಗಿ ಬಹಳಷ್ಟು ದಿನಗಳಾದರೂ ಅಡಿಕೆ ಖರೀದಿಯಲ್ಲಿ ವಿಳಂಬವಾಗಿರುವುದು ನಿಜವೇ ;

(ಇ) ಈ ರೀತಿಯ ವಿಳಂಬಕ್ಕೆ ಕಾರಣವೇನು ; ಯಾವಾಗ ಪ್ರಾರಂಭಿಸಲಾಗುವುದು ;

(ಈ) ಈ ಬಾರಿ ಅಡಿಕೆಗೆ ಬೆಂಬಲ ಬೆಲೆ ಘೋಷಣೆ ಮಾಡಿದ ನಂತರ, ಎಷ್ಟು ಪ್ರಮಾಣದ ಅಡಿಕೆ ಖರೀದಿ ಮಾಡಲಾಗಿದೆ ?

## ನಷ್ಟವನ್ನು ಅನುಭವಿಸುತ್ತಿರುವ ಅರಿಶಿಣ ಬೆಳೆಯ ಬೆಳೆಗಾರರಿಗೆ ಪರಿಹಾರ ನೀಡುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೬೪ (೩೦) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಒಟ್ಟಾರೆ ಎಷ್ಟು ಎಕರೆಯಲ್ಲಿ ಅರಿಶಿಣದ ಬೆಳೆ ಬೆಳೆಯಲಾಗುತ್ತಿದೆ ;

(ಆ) ಈ ಬಾರಿ ವರುಣನ ಅವಕೃಪೆಯಿಂದಾಗಿ ಅರಿಶಿಣದ ಬೆಳೆಯ ಇಳುವರಿ ಕ್ಷೀಣಿಸಿ, ಅರಿಶಿಣದ ಬೆಳೆಗಾರರಿಗೆ ನಷ್ಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ನಷ್ಟದ ಪ್ರಮಾಣವೇನು ;

(ಇ) ನಷ್ಟವಾಗಿರುವ ಬೆಳೆಗಾರರಿಗೆ ಯಾವ ರೀತಿಯ ಪರಿಹಾರ ನೀಡಲಾಗುವುದು ?

## ನಿರೀಕ್ಷಣಾ ಮಂದಿರಗಳಲ್ಲಿ ಮೂಲಭೂತ ಸೌಕರ್ಯಗಳ ಹಾಗೂ ಶುಚಿತ್ವದ ಕೊರತೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು):–**

೬೫ (೧೭) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು (ಐಬಿ) ನಿರೀಕ್ಷಣಾ ಮಂದಿರಗಳಿವೆ ; ಇವುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಐಬಿವಾರು ಮಾಹಿತಿ ಒದಗಿಸುವದು)

(ಆ) ಕೆಲವು ನಿರೀಕ್ಷಣಾ ಮಂದಿರ (ಐಬಿ) ಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಹಾಗೂ ಸ್ವಚ್ಛತೆಗಳಿಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ ಯಾವ ಕ್ರಮ ಕೈಗೊಳ್ಳಲಾಗಿದೆ ; (ಜಿಲ್ಲಾವಾರು, ಐ.ಬಿ.ವಾರು ಮಾಹಿತಿ ಒದಗಿಸುವುದು)

(ಇ) ೨೦೧೪ರಿಂದ ಈವರೆವಿಗೆ ನಿರೀಕ್ಷಣಾ ಮಂದಿರಗಳ ನಿರ್ವಹಣೆಗಾಗಿ ಬಿಡುಗಡೆಯಾದ ಅನುದಾನವೆಷ್ಟು; ಆ ಪೈಕಿ ಯಾವ ಯಾವ ಕಾಮಗಾರಿ ಹಾಗೂ ಸೌಕರ್ಯಗಳಿಗಾಗಿ ಎಷ್ಟೆಷ್ಟು ಹಣವನ್ನು ಖರ್ಚು ಮಾಡಲಾಗಿದೆ ? (ಜಿಲ್ಲಾವಾರು ಐ.ಬಿ. ವಾರು ಮಾಹಿತಿ ನೀಡುವುದು)

## ಕೃಷಿ ಮಾರುಕಟ್ಟೆಯ ಸಮಗ್ರ ಅಭಿವೃದ್ಧಿಯ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು):–**

೬೬ (೧೫) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿ ಉತ್ಪನ್ನ ಮಾರುಕಟ್ಟೆಯ ಸಮಗ್ರ ಅಭಿವೃದ್ಧಿಗಾಗಿ, ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ;

(ಆ) ಕೃಷಿ ಉತ್ಪನ್ನ ಮಾರುಕಟ್ಟೆ ಅಭಿವೃದ್ಧಿಗಾಗಿ ಬಿಡುಗಡೆಯಾದ ಅನುದಾನ ಮತ್ತು ಖರ್ಚಾದ ಅನುದಾನದ ಮೊತ್ತವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಸದರಿ ಅನುದಾನವನ್ನು ಯಾವ ಯಾವ ಉದ್ದೇಶಗಳಿಗೆ ಬಳಸಿಕೊಳ್ಳಲು ಅವಕಾಶವಿದೆ ; (ಸುತ್ತೋಲೆ ಮಾರ್ಗಸೂಚಿಗಳಿದ್ದಲ್ಲಿ ಒದಗಿಸುವುದು)

(ಈ) ಇದರಲ್ಲಿ ಐ.ಇ.ಸಿ (I.E.C.) ಕಾರ್ಯಕ್ರಮಗಳಿಗಾಗಿ ಎಷ್ಟು ಹಣವನ್ನು ನಿಗಧಿಪಡಿಸಲಾಗಿದೆ ಹಾಗೂ ಯಾವ ಯಾವ ಕಾರ್ಯಕ್ರಮಗಳಿಗಾಗಿ ಖರ್ಚು ಮಾಡಲಾಗಿದೆ ? (ಕಾರ್ಯಕ್ರಮವಾರು ವಿವರವಾದ ಮಾಹಿತಿ ನೀಡುವುದು)

## ೨೦೧೭-೧೮ನೇ ಸಾಲಿನ ಪಶುಸಂಗೋಪನಾ ಇಲಾಖೆಯ ಕಾರ್ಯಕ್ರಮಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು):–**

೬೭ (೧೬) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭-೧೮ನೇ ಸಾಲಿನಲ್ಲಿ ಹಮ್ಮಿಕೊಂಡಿರುವ ಪಶುಸಂಗೋಪನಾ ಇಲಾಖೆಯ ಕಾರ್ಯಕ್ರಮಗಳಾವುವು ;

(ಆ) ಸದರಿ ಕಾರ್ಯಕ್ರಮಗಳಿಗೆ ನಿಗಧಿಪಡಿಸಿದ ಒಟ್ಟು ಆರ್ಥಿಕ ಮತ್ತು ಭೌತಿಕ ಗುರಿಗಳೇನು ; (ಜಿಲ್ಲಾವಾರು ವಿವರ ನೀಡುವುದು)

(ಇ) ಕಳೆದ ಸಾಲಿನಲ್ಲಿ ಪಶುಭಾಗ್ಯ ಯೋಜನೆಯಡಿ ಒಟ್ಟು ಎಷ್ಟು ಫಲಾನುಭವಿಗಳಿಗೆ ಸೌಲಭ್ಯ ನೀಡಲಾಗಿದೆ ; (ಜಿಲ್ಲಾವಾರು ವಿವರ ಒದಗಿಸುವುದು)

(ಈ) ಕಳೆದ ಸಾಲಿನಲ್ಲಿ ಹಾವೇರಿ ಜಿಲ್ಲೆಯ ಪಶುಸಂಗೋಪನಾ ಇಲಾಖೆಯ ವಿವಿಧ ಯೋಜನೆಗಳಿಗೆ ನಿಗಧಿಪಡಿಸಿದ ಆರ್ಥಿಕ ಭೌತಿಕ ಗುರಿಗಳಿಗೆ ಅನುಗುಣವಾಗಿ ಬಿಡುಗಡೆಯಾದ ಹಾಗೂ ಖರ್ಚಾದ ಅನುದಾನವೆಷ್ಟು; ಪ್ರಸಕ್ತ ಸಾಲಿನಲ್ಲಿ ಹಾವೇರಿ ಜಿಲ್ಲೆಗೆ ಮೀಸಲಿಟ್ಟ ಅನುದಾನವೆಷ್ಟು ?

## ಗದಗ–ಬೆಟಗೇರಿ ಅವಳಿ ನಗರದ ಒಳಚರಂಡಿ ಕಾಮಗಾರಿ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ):–**

೬೮ (೩೫) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗದಗ–ಬೆಟಗೇರಿ ಅವಳಿ ನಗರದ ಒಂದನೇ ಹಂತದ ಒಳಚರಂಡಿ ಯೋಜನೆ ಕಾಮಗಾರಿ ಪ್ರಾರಂಭಗೊಂಡಿದ್ದು ಯಾವಾಗ ; ಆ ಯೋಜನೆ ಪೂರ್ಣಗೊಂಡು ಕಾರ್ಯ ಪ್ರಾರಂಭಗೊಂಡಿದೆಯೇ ;

(ಆ) ಗದಗ–ಬೆಟಗೇರಿ ಅವಳಿ–ನಗರದ ಒಂದನೇ ಹಂತದ ಒಳಚರಂಡಿ ಯೋಜನೆಯು ಮಲೀನ ನೀರು ಶುದ್ಧೀಕರಣ ಘಟಕ ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿದೆಯೇ ; ಈ ಘಟಕದಿಂದ ಶುದ್ಧೀಕರಣವಾದ ನೀರನ್ನು ಯಾವ ಉದ್ದೇಶಕ್ಕಾಗಿ ಬಳಸಲಾಗುತ್ತಿದೆ ;

(ಇ) ಗದಗ–ಬೆಟಗೇರಿ ಅವಳಿ ನಗರದ ವಿವಿಧ ಭಾಗಗಳಲ್ಲಿ ಬಹಳಷ್ಟು ಒಳಚರಂಡಿ ಬ್ಲಾಕ್ ಆಗಿರುವುದು ಇಲಾಖೆ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸಮರ್ಪಕ ಕಾರ್ಯ ನಿರ್ವಹಣೆಗಾಗಿ ಏನು ಕ್ರಮ ಕೈಗೊಳ್ಳಲಾಗಿದೆ ; ಕಾಮಗಾರಿ ಪೂರ್ಣಗೊಳಿಸುವ ಗುತ್ತಿಗೆದಾರರು ಪ್ರಾಥಮಿಕವಾಗಿ ತಪಾಸಣೆ ಮಾಡಿ ನಗರಸಭೆಗೆ ಹಸ್ತಾಂತರಿಸಿದ್ದಾರೆಯೇ ;

(ಈ) ವಿವಿಧ ಭಾಗಗಳಲ್ಲಿ ಅಡಗಿರುವ ಚೇಂಬರ್ ಹಾಗೂ ಯು.ಜಿ.ಡಿ. ಪೈಪ್ ಬ್ಲಾಕ್‌ಗಳನ್ನು ಸರಿಪಡಿಸಲು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ, ಗದಗ, ಇವರಿಂದ ಹೆಚ್ಚಿನ ಅನುದಾನಕ್ಕಾಗಿ ಕೋರಿ ಮಂಡಳಿಗೆ ಪ್ರಸ್ತಾವನೆ ಸಲ್ಲಿಸಿದ್ದು,

ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಯೋಜನೆ ಹೆಚ್ಚುವರಿ ಅನುದಾನಕ್ಕಾಗಿ ಯಾರನ್ನು ಜವಾಬ್ದಾರನ್ನಾಗಿ ಮಾಡಲಾಗುತ್ತಿದೆ ; ಹಾಗೂ ಯು.ಜಿ.ಡಿ. ಸುಧಾರಣೆಗಾಗಿ ಸರ್ಕಾರದಿಂದ ಜಲಮಂಡಳಿಗೆ ಅನುದಾನ ಬಿಡುಗಡೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

## ಸರ್ಕಾರಿ ಕಟ್ಟಡಗಳಿಗೆ ಸೋಲಾರ್ ಪ್ಯಾನಲ್‌ಗಳನ್ನು ಅಳವಡಿಸುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೯ (೪೦) ಮಾನ್ಯ ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಪ್ರಮುಖ ಸರ್ಕಾರಿ ಕಟ್ಟಡಗಳಾದ ವಿಧಾನಸೌಧ, ವಿಕಾಸ ಸೌಧ, ಬಹುಮಹಡಿ ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸಲು ವಿದ್ಯುತ್‌ನ್ನು ಯಾವ ಮೂಲದಿಂದ ಪಡೆಯಲಾಗುತ್ತಿದೆ ಹಾಗೂ ಇದಕ್ಕಾಗಿ ವರ್ಷಕ್ಕೆ ವ್ಯಯಿಸಲಾಗುತ್ತಿರುವ ಹಣವೆಷ್ಟು ;

(ಆ) ಈ ಕಟ್ಟಡಗಳಲ್ಲಿ ರಾಜ್ಯಕ್ಕೆ ಸೋಲಾರ್ ಪ್ಯಾನಲ್‌ಗಳನ್ನು ಅಳವಡಿಸಿಕೊಳ್ಳುವ ಮೂಲಕ ರಾಜ್ಯದ ಇತರೆ ಸರ್ಕಾರಿ ಕಟ್ಟಡಗಳಿಗೆ ಮಾದರಿಯಾಗುವಂತೆ ಮಾಡಲು ಸರ್ಕಾರದ ನಿಲುವೇನು ? (ವಿವರ ನೀಡುವುದು)

## ನಂದಿ ಮತ್ತು ಕೆಮ್ಮಣ್ಣು ಗಿರಿಧಾಮ ಕೇಂದ್ರಗಳು

**ಶ್ರೀ ವಿ.ಎಸ್.ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೭೦ (೭೦) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಬಳ್ಳಾಪುರ ಜಿಲ್ಲೆಯ ನಂದಿ ಗಿರಿಧಾಮ ಮತ್ತು ಚಿಕ್ಕಮಗಳೂರು ಜಿಲ್ಲೆಯ ಕೆಮ್ಮಣ್ಣಗುಂಡಿ ಗಿರಿಧಾಮಗಳ ವಿಸ್ತೀರ್ಣವೆಷ್ಟು ; ಆ ಗಿರಿಧಾಮಗಳು ಸಮುದ್ರ ಮಟ್ಟದಿಂದ ಎಷ್ಟು ಎತ್ತರದಲ್ಲಿವೆ ;

(ಆ) ಇವುಗಳನ್ನು ಸರ್ಕಾರ ಪ್ರವಾಸೋದ್ಯಮ ಕೇಂದ್ರಗಳನ್ನಾಗಿ ಗುರುತಿಸಲಾಗಿದೆಯೇ ;

(ಇ) ಹಾಗಿದ್ದಲ್ಲಿ, ಈ ಗಿರಿಧಾಮಗಳ ಅಭಿವೃದ್ಧಿಗಾಗಿ ಸರ್ಕಾರ ರೂಪಿಸಿರುವ ಯೋಜನೆಗಳು ಯಾವುವು ; ಆ ಗಿರಿಧಾಮಗಳಲ್ಲಿ ಯಾವ ಯಾವ ಮೂಲ ಸೌಕರ್ಯಗಳನ್ನು ಒದಗಿಸಲಾಗಿದೆ ? (ವಿವರ ನೀಡುವುದು)

## ಸೌರ ಮತ್ತು ಪವನ ವಿದ್ಯುತ್ ಉತ್ಪಾದನಾ ಯಂತ್ರಗಳಿಂದ ವಿದ್ಯುತ್ ಉತ್ಪಾದನೆ

**ಶ್ರೀ ವಿ.ಎಸ್.ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೭೧ (೬೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಯಾವ ಯಾವ ಪ್ರದೇಶದಲ್ಲಿ ಸೌರ ವಿದ್ಯುತ್ ಮತ್ತು ಪವನ ವಿದ್ಯುತ್ ಉತ್ಪಾದನಾ ಯಂತ್ರಗಳನ್ನು ಅಳವಡಿಸಿ ಎಷ್ಟು ಪ್ರಮಾಣದ ವಿದ್ಯುತ್ ಉತ್ಪಾದಿಸಲಾಗುತ್ತಿದೆ ; (ಜಿಲ್ಲಾವಾರು, ತಾಲ್ಲೂಕುವಾರು ಮತ್ತು ಗ್ರಾಮವಾರು ವಿವರ ನೀಡುವುದು)

(ಆ) ಒಂದೊಂದು ಪವನ ಮತ್ತು ಸೌರ ವಿದ್ಯುತ್ ಉತ್ಪಾದನಾ ಯಂತ್ರಗಳನ್ನು ಅಳವಡಿಸಲು ಅಗತ್ಯವಾದ ಭೂಪ್ರದೇಶ ಎಷ್ಟು ; ಪ್ರತಿ ಯಂತ್ರದ ಅಳವಡಿಕೆಗೆ ತಗಲುವ ವೆಚ್ಚ ಎಷ್ಟು ;

(ಇ) ಈ ವಿದ್ಯುತ್ ಉತ್ಪಾದನಾ ಯಂತ್ರಗಳನ್ನು ಅಳವಡಿಸಲು ರಾಜ್ಯ ಮತ್ತು ಕೇಂದ್ರ ಸರ್ಕಾರದಿಂದ ಸಹಾಯಧನ ನೀಡಲಾಗುತ್ತಿದೆಯೇ;

(ಈ) ನೀಡುತ್ತಿದ್ದಲ್ಲಿ, ಎಷ್ಟು ಸಹಾಯಧನವನ್ನು ಯಾವ ಯಾವ ವರ್ಗಕ್ಕೆ ನೀಡಲಾಗುತ್ತಿದೆ ;

(ಉ) ಈ ಸೌರ ಮತ್ತು ಪವನ ವಿದ್ಯುತ್ ಉತ್ಪಾದನಾ ಯಂತ್ರಗಳಿಂದ ಉತ್ಪಾದಿಸುವ ವಿದ್ಯುತ್ತನ್ನು ಸರ್ಕಾರ ಯಾವ ಯಾವ ದರದಲ್ಲಿ ಖರೀದಿ ಮಾಡುತ್ತಿದೆ ? (ವಿವರ ನೀಡುವುದು)

## SCP/TSP ಅಡಿಯಲ್ಲಿ ಕೃಷಿ ಉಪಕರಣಗಳನ್ನು ಖರೀದಿಸುವ ಕುರಿತು

**ಶ್ರೀ ಡಿ.ಎಸ್.ವೀರಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೭೨ (೯೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) SCP/TSP ಅಡಿಯಲ್ಲಿ ಪರಿಶಿಷ್ಠ ಜಾತಿ / ಪರಿಶಿಷ್ಠ ಪಂಗಡ ಫಲಾನುಭವಿಗಳಿಗೆ ನೀಡುತ್ತಿದ್ದ ಸಹಾಯಧನವನ್ನು ಕೃಷಿ ಉಪಕರಣಗಳನ್ನು ಖರೀದಿಸಿದ ನಂತರ ನೀಡಲಾಗುತ್ತಿದೆಯೇ;

(ಆ) ಇಂತಹ ನಿಯಮದಿಂದಾಗಿ SCP/TSP ಫಲಾನುಭವಿಗಳು ಅವರ ಸ್ವಂತ ಹಣದಿಂದ ಉಪಕರಣಗಳನ್ನು ಖರೀದಿಸಿದ ನಂತರ ಸಹಾಯಧನ ಪಡೆಯಲು ತೊಂದರೆಯಾಗುವುದಿಲ್ಲವೇ ;

(ಇ) ಈ ಹೊಸ ನಿಯಮದಿಂದಾಗಿ SCP/TSP ಹಣ ಇಲಾಖೆಯಲ್ಲಿ ಬಳಕೆ ಆಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ೨೦೧೪-೧೫ ಹಾಗೂ ೨೦೧೫-೧೬ನೇ ಸಾಲುಗಳಲ್ಲಿ SCP/TSP ಅನುದಾನ ಬಳಕೆ ಆಗದೆ ಉಳಿದಿರುವ ಮೊತ್ತವೆಷ್ಟು;

(ಉ) SCP/TSP ಅಡಿ ಫಲಾನುಭವಿಗಳು ಕೃಷಿ ಉಪಕರಣಗಳನ್ನು ಖರೀದಿಸಲು ಅನುಕೂಲ ಆಗುವಂತೆ ಸರಬರಾಜುದಾರರಿಗೆ ನೇರವಾಗಿ ನೀಡುವುದರ ಮುಖಾಂತರ ಈ ಯೋಜನೆ ಜಾರಿಗೊಳಿಸಲು ಇಲಾಖೆಗೆ ಇರುವ ಅಡೆ-ತಡೆಗಳೇನು ?

## Plants Seedlings Planted at Lalbagh Botanical Garden

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನ ಸಭೆಯಿಂದ ಚುನಾಯಿತರಾದವರು):-**

೭೩ (೮೯) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(a) How many plants/seedling have been planted in Lalbagh Botanical Garden since 2010 January ; (Give details of plants imported from other Countries, States and Districts)

(b) What was the cost incurred by the department to source these plants and fetch them to Lalbagh for planting ; (Give details of the cost according to plant variety)

(c) How many plants/seedlings have survived till date; (Give details)

(d) How many plants have perished ? (Give reasons for failure of plants)

## ರಾಷ್ಟ್ರೀಯ, ರಾಜ್ಯ ಮತ್ತು ಜಿಲ್ಲಾ ಮುಖ್ಯ ರಸ್ತೆಗಳು

**ಶ್ರೀ ವಿ.ಎಸ್.ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೭೪ (೭೧) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಕಿ.ಮೀ. ಉದ್ದದಲ್ಲಿ ರಾಷ್ಟ್ರೀಯ, ರಾಜ್ಯ ಹಾಗೂ ಜಿಲ್ಲಾ ಮುಖ್ಯ ರಸ್ತೆಗಳು ಅಸ್ಥಿತ್ವದಲ್ಲಿವೆ ;

(ಆ) ಯಾವ ಯಾವ ತಾಲ್ಲೂಕುಗಳಲ್ಲಿ ಅಂತಹ ರಸ್ತೆಗಳು ಹಾದು ಹೋಗಿವೆ ; (ರಸ್ತೆವಾರು ಮಾಹಿತಿ ನೀಡುವುದು)

(ಇ) ಈ ರಸ್ತೆಗಳ ಅಭಿವೃದ್ಧಿಗೆ ಕೈಗೊಂಡಿರುವ ಕ್ರಮಗಳೇನು ;

(ಈ) ಇದುವರೆಗೆ ಯಾವ ರಸ್ತೆಗೆ ಎಷ್ಟು ಹಣವನ್ನು ವೆಚ್ಚ ಮಾಡಲಾಗಿದೆ; (ವಿವರ ನೀಡುವುದು)

(ಉ) ಯಾವ ಯಾವ ರಸ್ತೆಗಳ ಕಾಮಗಾರಿ ಕಳಪೆ ಎಂದು ಗುರುತಿಸಲಾಗಿದೆ ; ಆ ಕಳಪೆ ಕಾಮಗಾರಿಗಳಿಗೆ ಕಾರಣರಾರು ; ಅವರುಗಳ ಮೇಲೆ ಯಾವ ಕ್ರಮ ಜರುಗಿಸಲಾಗಿದೆ ? (ರಸ್ತೆವಾರು ವಿವರ ನೀಡುವುದು)

## ವಿಧಾನಸೌಧ ಮತ್ತು ವಿಕಾಸಸೌಧ ಕಟ್ಟಡಗಳ ನಿರ್ಮಾಣ ಕಾರ್ಯ ಮತ್ತು ತಗುಲಿದ ವೆಚ್ಚ

**ಶ್ರೀ ವಿ.ಎಸ್.ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೭೫ (೭೨) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಧಾನಸೌಧ ಮತ್ತು ವಿಕಾಸಸೌಧ ಕಟ್ಟಡಗಳ ಶಂಕು ಸ್ಥಾಪನೆ ಮತ್ತು ಅವುಗಳ ಉದ್ಘಾಟನೆ ಯಾವ ಯಾವ ವರ್ಷದಲ್ಲಿ ಜರುಗಿದೆ; ಆ ಕಾರ್ಯಕ್ರಮಗಳಲ್ಲಿ ಭಾಗವಹಿಸಿದ್ದ ಮುಖ್ಯ ಮಂತ್ರಿಗಳು ಹಾಗೂ ಇತರೆ ನಾಯಕರುಗಳು ಯಾರು ಯಾರು ; (ಪೂರ್ಣ ವಿವರ ನೀಡುವುದು)

(ಆ) ಸದರಿ ಎರಡೂ ಕಟ್ಟಡಗಳ ನಿರ್ಮಾಣ ಮಾಡಲು ತೆಗೆದಕೊಂಡ ಅವಧಿ ಎಷ್ಟು ; (ಮಾಹಿತಿ ನೀಡುವುದು),

(ಇ) ವಿಧಾನಸೌಧ ಮತ್ತು ವಿಕಾಸಸೌಧ ಕಟ್ಟಡಗಳ ನಿರ್ಮಾಣಕ್ಕೆ ನಿಗಧಿ ಮಾಡಿದ್ದ ಅಂದಾಜು ವೆಚ್ಚ ಎಷ್ಟು ; ಅಂತಿಮವಾಗಿ ಖರ್ಚು ಮಾಡಿದ ವೆಚ್ಚ ಎಷ್ಟು ; (ಪೂರ್ಣ ವಿವರ ನೀಡುವುದು)

(ಈ) ಈ ಎರಡೂ ಕಟ್ಟಡಗಳ ವಿನ್ಯಾಸವನ್ನು ಮಾಡಿದವರು ಯಾರು; ಕಟ್ಟಡಗಳ ನಿರ್ಮಾಣ ಮಾಡಲು ಕಾರಣೀಕರ್ತರುಗಳಾದ ನಾಯಕರನ್ನು ಸದಾ ನೆನಪಿಸಿಕೊಳ್ಳಲು ಸರ್ಕಾರ ತೆಗೆದು ಕೊಂಡಿರುವ ಕ್ರಮಗಳೇನು ?

## ಮೇಲ್ದರ್ಜೆಗೇರಿಸಿದ ಪಟ್ಟಣ ಪಂಚಾಯತ್ ಹಾಗೂ ಪುರಸಭೆ ಸಿಬ್ಬಂದಿಗಳನ್ನು ಪೌರಾಡಳಿತ ಇಲಾಖೆಗೆ ಸೇರ್ಪಡೆ ಮಾಡುವ ಬಗ್ಗೆ.

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೬ (೩೮) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಈ ಹಿಂದೆ ಗ್ರಾಮ ಪಂಚಾಯತ್‌ನಿಂದ, ಮೇಲ್ದರ್ಜೆಗೇರಿಸಿದ ಪಟ್ಟಣ ಪಂಚಾಯತ್ ಹಾಗೂ ಪುರಸಭೆ ಆದಂತಹ ಪಂಚಾಯತ್‌ಗೆ ಸಿಬ್ಬಂದಿಗಳನ್ನು ಪೌರಾಡಳಿತ ಇಲಾಖೆಗೆ ಸೇರ್ಪಡೆ ಮಾಡಲಾಗಿದೆಯೇ ;

(ಆ) ಯಾವ ಯಾವ ಪಟ್ಟಣ ಪಂಚಾಯತ್ ಪುರಸಭೆ ನೌಕರರನ್ನು ಖಾಯಂಗೊಳಿಸಲು ಸರ್ಕಾರ ಕ್ರಮ ಕೈಗೊಂಡಿದೆ ;

(ಇ) ಹೊಸದಾಗಿ ರಚನೆಯಾದ ಪಟ್ಟಣ ಪಂಚಾಯತ್ ಹಾಗೂ ಪುರಸಭೆಗಳಿಗೆ ನೀಡಿರುವ ಅನುದಾನವೆಷ್ಟು ; ಆ ಪೈಕಿ ಖರ್ಚಾದ ಅನುದಾನವೆಷ್ಟು ?

## ಹೈದರಾಬಾದ್–ಕರ್ನಾಟಕ ಜಿಲ್ಲೆಯ ತೋಟಗಾರಿಕೆ ಇಲಾಖೆಯ ಸಿಬ್ಬಂದಿಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೭ (೩೯) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದರಾಬಾದ್–ಕರ್ನಾಟಕ ಜಿಲ್ಲೆಯಲ್ಲಿ (ಕೋಲ್ಡ್ ಸ್ಟೋರೇಜ್) ತಂಪು ಉಗ್ರಾಣಗಳು ಎಷ್ಟು ;

(ಆ) ಹೈದರಾಬಾದ್–ಕರ್ನಾಟಕದ ತೋಟಗಾರಿಕೆ ಇಲಾಖೆಯಲ್ಲಿ ಇರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು) ನೇಮಕಾತಿ ಪ್ರಕ್ರಿಯೆ ಪ್ರಾರಂಭವಾಗಿದೆಯೇ ;

(ಇ) ಈ ಜಿಲ್ಲೆಯಲ್ಲಿ ಬೆಳೆದಂತಹ ಬೆಳೆಗಳನ್ನು ಮಾರಾಟ ಮಾಡಲು ಮಾರುಕಟ್ಟೆಯನ್ನು ಕಲ್ಪಿಸಲಾಗಿದೆಯೇ ? (ವಿವರ ನೀಡುವುದು)

## ರಾಜ್ಯದಲ್ಲಿನ ವಿದ್ಯುತ್ ಉತ್ಪಾದನೆ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೭೮ (೧೧೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಾರ್ಷಿಕವಾಗಿ ಅಗತ್ಯವಿರುವ ವಿದ್ಯುತ್ತಿನ ಪ್ರಮಾಣವೆಷ್ಟು; (ಯೂನಿಟ್‌ಗಳಲ್ಲಿ ಮಾಹಿತಿ ನೀಡುವುದು)

(ಆ) ಪ್ರಸ್ತುತ ಯಾವ ಯಾವ ಮೂಲಗಳಿಂದ ವಿದ್ಯುತ್ ಉತ್ಪಾದನೆಯಾಗುತ್ತಿದೆ ; (ಪ್ರತಿ ವಿದ್ಯುತ್ ಉತ್ಪಾದನೆ ಘಟಕ ಹಾಗೂ ಉತ್ಪಾದನೆಯ ವಿವರ ನೀಡುವುದು)

(ಇ) ತುಮಕೂರು ಜಿಲ್ಲೆಗೆ ಅತಿ ಕಡಿಮೆ ಪ್ರಮಾಣ ನಿಗಧಿಪಡಿಸಿರುವುದಕ್ಕೆ ಕಾರಣವೇನು ;

(ಈ) ತುಮಕೂರು ಜಿಲ್ಲೆಯಲ್ಲಿ ಅಗತ್ಯವಾದ ವಿದ್ಯುತ್ ಉತ್ಪಾದನೆಗೆ ತೆಗೆದುಕೊಂಡ ಕ್ರಮವೇನು ?

## ರಾಜ್ಯದ ಗುಡ್ಡಗಾಡು ಪ್ರದೇಶಗಳಲ್ಲಿ ಗಾಳಿಯಂತ್ರಗಳನ್ನು ಅಳವಡಿಸುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೭೯ (೧೦೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರದ ವತಿಯಿಂದ ರಾಜ್ಯದಲ್ಲಿನ ಯಾವ ಯಾವ ಪ್ರದೇಶಗಳಲ್ಲಿ ಗಾಳಿಯಂತ್ರಗಳನ್ನು ನಿರ್ಮಿಸಿ ವಿದ್ಯುತ್ ಉತ್ಪಾದನೆ ಮಾಡಲು ಸರ್ಕಾರವು ಯೋಜಿಸಿದೆ ;

(ಆ) ಹಾಗಿದ್ದಲ್ಲಿ, ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಯೋಗ್ಯವಿರುವ ಯಾವ ತಾಲ್ಲೂಕು ಪ್ರದೇಶಗಳಲ್ಲಿ ಗಾಳಿಯಂತ್ರಗಳನ್ನು ಅಳವಡಿಸಲು ಗುರುತಿಸಿದೆ ; ಈಗಾಗಲೇ ಗುರುತಿಸಿರುವ ತಾಲ್ಲೂಕುಗಳು ಯಾವುವು ;

(ಇ) ಇದರಿಂದ ಎಷ್ಟು ಪ್ರಮಾಣದ ವಿದ್ಯುತ್ ಉತ್ಪಾದನೆಯನ್ನು ಮಾಡಲು ಸರ್ಕಾರವು ಯೋಚಿಸಿದೆ ; ಸ್ಥಳೀಯವಾಗಿ ರೈತರು ಉತ್ಪಾದಿಸಿದ ವಿದ್ಯುತ್‌ನ್ನು ಸರ್ಕಾರವು ಯಾವ ದರದಲ್ಲಿ ಖರೀದಿ ಮಾಡಲು ಕ್ರಮ ಕೈಗೊಂಡಿದೆ ?

## ತುಮಕೂರು ಜಿಲ್ಲೆಯಲ್ಲಿ ಹಾಳಾಗಿರುವ ರಸ್ತೆಗಳ ಅಭಿವೃದ್ಧಿ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೮೦ (೧೧೧) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆಯಲ್ಲಿ ರಸ್ತೆಗಳು ತುಂಬಾ ಹಾಳಾಗಿದ್ದು, ಜಿಲ್ಲೆಯ ರಸ್ತೆಗಳ ಅಭಿವೃದ್ಧಿ ಹಾಗೂ ದುರಸ್ಥಿ ಮತ್ತು ಪುನರ್ ನಿರ್ಮಾಣ ಕಾರ್ಯಕ್ಕೆ ಪ್ರಸಕ್ತ ವರ್ಷದಲ್ಲಿ ನೀಡಿರುವ ಹಣವೆಷ್ಟು ;

(ಆ) ಸದರಿ ಅನುದಾನದಲ್ಲಿ ಜಿಲ್ಲೆಯಲ್ಲಿ ಯಾವ್ಯಾವ ರಸ್ತೆಗಳ ಅಭಿವೃದ್ಧಿಗೆ ಕ್ರಮ ತೆಗೆದುಕೊಳ್ಳಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಜಿಲ್ಲೆಯಲ್ಲಿ ರಸ್ತೆಗಳು ಸಂಪೂರ್ಣ ಹಾಳಾಗಿದ್ದು, ಜಿಲ್ಲೆಯ ಅನೇಕ ಅಭಿವೃದ್ಧಿ ಕಾರ್ಯಗಳಿಗೆ ಅಡಚಣೆ ಉಂಟಾಗಿರುವುದರಿಂದ ರಸ್ತೆಗಳನ್ನು ತ್ವರಿತಗತಿಯಲ್ಲಿ ದುರಸ್ಥಿಪಡಿಸಲು ಸರ್ಕಾರದಿಂದ ಯಾವ ರೀತಿ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗುವುದು?

## ತೋಟಗಾರಿಕೆ ಇಲಾಖೆಯಲ್ಲಿರುವ ಸೌಲಭ್ಯ ಹಾಗೂ ಸಹಾಯಧನ ಕುರಿತು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೮೧ (೧೦೯) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತೋಟಗಾರಿಕೆ ಇಲಾಖೆಯಿಂದ ರೈತರಿಗೆ ಒದಗಿಸಲಾಗುತ್ತಿರುವ ಸೌಲಭ್ಯಗಳೇನು ; ಅವು ಯಾವುವು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ತೋಟಗಾರಿಕೆ ಇಲಾಖೆಯಿಂದ ರೈತರಿಗೆ ನೀಡಿರುವ ಉಪಕರಣಗಳಿಗೆ ಹಾಗೂ ಇನ್ನಿತರೆ ಯೋಜನೆಗಳ ಅಡಿಯಲ್ಲಿ ನೀಡಿರುವ ಸಹಾಯಧನ ಎಷ್ಟು ; (ವರ್ಷವಾರು, ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಇ) ಕಳೆದ ೩ ವರ್ಷಗಳಲ್ಲಿ ತುಮಕೂರು ಜಿಲ್ಲೆಯಲ್ಲಿ ರೈತರಿಗೆ ವಿವಿಧ ಯೋಜನೆಗಳ ಅಡಿಯಲ್ಲಿ ಮಂಜೂರಾದ ಅನುದಾನವೆಷ್ಟು ; ಆ ಪೈಕಿ ಖರ್ಚಾದ ಅನುದಾನವೆಷ್ಟು ; ಬಾಕಿಯಿರುವ ಅನುದಾನವೆಷ್ಟು; (ವರ್ಷವಾರು, ತಾಲ್ಲೂಕುವಾರು, ಫಲಾನುಭವಿಗಳ ಹೆಸರು ಸಹಿತ ಸಂಪೂರ್ಣ ಮಾಹಿತಿ ನೀಡುವುದು)

(ಈ) ತುಮಕೂರು ಜಿಲ್ಲೆಯಲ್ಲಿ ಆತ್ಮಹತ್ಯೆ ಮಾಡಿಕೊಂಡ ರೈತರ ಸಂಖ್ಯೆ ಎಷ್ಟು ; ರೈತರ ಆತ್ಮಹತ್ಯೆಗೆ ಸೂಕ್ತ ಕಾರಣವೇನು ; ಸದರಿ ರೈತರ ಕುಟುಂಬಕ್ಕೆ ನೀಡಿದ ಪರಿಹಾರ ಮೊತ್ತವೆಷ್ಟು ; ನೀಡಬೇಕಾದ ಪರಿಹಾರ ಮೊತ್ತವೆಷ್ಟು ? (ತಾಲ್ಲೂಕುವಾರು, ಫಲಾನುಭವಿಗಳವಾರು ಮಾಹಿತಿ ನೀಡುವುದು)

## ಸೈನಿಕರಿಗೆ ನಿವೇಶನ ಹಕ್ಕು ಪತ್ರ ಹಸ್ತಾಂತರಿಸದಿರುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೮೨ (೧೦೭) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳು ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಾಗಲಕೋಟೆ ಜಿಲ್ಲೆ, ಜಮಖಂಡಿ ತಾಲ್ಲೂಕಿನಲ್ಲಿ ಸೈನಿಕರಿಗೆ ಪುರಸಭೆಯಿಂದ ನಿವೇಶನ ಹಂಚಿಕೆ ಮಾಡಲಾಗಿದ್ದು ಯಾವಾಗ; ಎಷ್ಟು ಜನರಿಗೆ ಹಂಚಿಕೆ ಮಾಡಲಾಗಿದೆ ; ಹಕ್ಕು ಪತ್ರಗಳನ್ನು ಹಸ್ತಾಂತರಿಸಲಾಗಿದೆಯೇ ;

(ಆ) ಇತ್ತೀಚೆಗೆ ಹಕ್ಕು ಪತ್ರ ರದ್ದುಗೊಳಿಸಲು ಕಾರಣವೇನು ;

(ಇ) ರದ್ದುಗೊಳಿಸಿದ ನಿವೇಶನಗಳ ಬದಲಾಗಿ ಬೇರೆ ನಿವೇಶನ ನೀಡಲು ಕ್ರಮ ಕೈಗೊಳ್ಳಲಾಗಿದೆಯೇ ; ಹಾಗಿದ್ದಲ್ಲಿ ಎಲ್ಲಿ ಯಾವಾಗ ನೀಡಲಾಗುವುದು ?

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

---

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0242/800 ಪ್ರತಿಗಳು/30–01–2017